# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 211 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 08–03–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 211 | Title- Code: KARKAN 28269 | Chitradurga | Date: 08-03-2024 Friday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಹೊಸದುರ್ಗ: ಬಿಸಿಲಿನ ಧಗೆಗೆ ಪಟ್ಟದ ಜನತೆಯ ತತ್ತರ 2

ನಾಯಕನೌಕರರ ಕಾರ್ಯಕ್ರಮಕ್ಕೆ ಶಾಸಕ ರಘುಮೂರ್ತಿ ಮೆಚ್ಚುಗೆ 3

ಅಧಿಕಾರಿಗಳ ಬಳಿ ತಪ್ಪು ಕೆಲಸ ಮಾಡಿಸಿಲ್ಲ: ಶಾಸಕ ಗೋವಿಂದಪ್ಪ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಕಾಂಗ್ರೆಸ್ ಪಕ್ಷದಲ್ಲಿ ನಾಯಕತ್ವವೇ ಇಲ್ಲ

## ಬಿಜೆಪಿ ಬೂತ್ ಪ್ರಮುಖರ ಸಮಾವೇಶದಲ್ಲಿ ಗೋವಾ ಮುಖ್ಯಮಂತ್ರಿ ಡಾ.ಪ್ರಮೋದ್ ಸಾವಂತ್





» ಚಿತ್ರದುರ್ಗ

ಕರ್ನಾಟಕದಲ್ಲಿರುವುದು ಎಟಿಎಂ ಸರ್ಕಾರ. ರಾಜ್ಯವನ್ನು ಲೂಟಿ ಹೊಡೆದು ತನ್ನ ನಾಯಕರಾದ ರಾಹುಲ್ ಗಾಂಧಿ ಹಾಗೂ ಸೋನಿಯಾ ಗಾಂಧಿಗೆ ಕಳಿಸುತ್ತಿದೆ ಎಂದು ಗೋವಾ ಮುಖ್ಯಮಂತ್ರಿ ಡಾ.ಪ್ರಮೋದ್ ಸಾವಂತ್ ಆರೋಪಿಸಿದ್ದಾರೆ.

ನಗರದ ಕಮ್ಮಾರೆಡ್ಡಿ ಸಮುದಾಯ ಭವನದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಬಿಜೆಪಿ ಬೂತ್ ಪ್ರಮುಖರ ಸಮಾವೇಶ ಹಾಗೂ ಪ್ರಬುದ್ಧರ ಸಭೆಯ ಉದ್ಘಾಟಿಸಿ ಮಾತನಾಡಿದ ಅವರು, 10 ವರ್ಷದ ಹಿಂದೆ ಬಿಜೆಪಿ ಗೆದ್ದ ನಂತರ ಮೋದಿ ಎಲ್ಲಾ ಗ್ಯಾರೆಂಟಿ ಪೂರೈಸಿದ್ದಾರೆ. ಆದರೆ ಕಾಂಗ್ರೆಸ್ ಗ್ಯಾರೆಂಟಿ ಪೂರೈಸಲು ಸಾಧ್ಯವೇ ಇಲ್ಲ. ಕಾರಣ ಮೊದಲಿನಿಂದಲೂ ಸಿದ್ದರಾಮಯ್ಯ ಹೇಳಿದಂತೆ ನಡೆದುಕೊಂಡಿಲ್ಲ ಎಂದು ದೂರಿದರು.

ಸಿಎಂ ಸಿದ್ದರಾಮಯ್ಯ, ಡಿಕೆಶಿ ನಡುವೆ ಜಿದ್ದಾಜಿದ್ದಿ ನಡೆಯುತ್ತಿದೆ. ಡಿಸಿಎಂ ಡಿಕೆಶಿಗೆ ಡಮ್ಮಿ ಚೀಫ್ ಮಿನಿಸ್ಟರ್ ಆಗಿದ್ದು, ಇನ್ನೂ ಐವರು ಸಿಎಂ ಆಗಲು ಸರದಿಯಲ್ಲಿ ನಿಂತಿದ್ದಾರೆ. ಗೃಹ ಸಚಿವ ಡಾ.ಜಿ.ಪರಮೇಶ್ವರ್, ಜಾರಕಿಹೊಳಿಗೆ ಸಿಎಂ ಬಯಕೆಯಿದೆ. ತಾನು ಸೂಪರ್ ಸಿಎಂ ಎಂದು ಪ್ರಿಯಾಂಕ್ ಖರ್ಗೆ ಹೇಳುತ್ತಾರೆ. ಯತೀಂದ್ರ ಸಿದ್ದರಾಮಯ್ಯ ಶ್ಯಾಡೋ ಸಿಎಂ ಆಗಿದ್ದಾರೆ. ಆದರೆ ಬಿಜೆಪಿಯಲ್ಲಿ ಒಬ್ಬರೇ ದೇಶದ ಪ್ರಧಾನಿ ನರೇಂದ್ರ ಮೋದಿ ಎಂದರು.

ರಾಜ್ಯದಲ್ಲಿ ಕಳೆದ 10ತಿಂಗಳಲ್ಲಿ 500 ರೈತರು ಆತ್ಮಹತ್ಯೆಗೆ ಶರಣಾಗಿದ್ದಾರೆ. ಇದು ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ನಾಚಿಕೆಯ ಸಂಗತಿ. ರೈತರಿಗೆ ನೀಡುವ ಸಬ್ಸಿಡಿ ಮತ್ತಿತರೆ ಯೋಜನೆಗಳು ನೀಡಿಲ್ಲ. ಸಿಎಂ ಸಿದ್ಧರಾಮಯ್ಯ ಘೋಷಿಸಿದ ಗ್ಯಾರಂಟಿ ಪೂರ್ಣಗೊಳಿಸಿಲ್ಲ.ಆದರೆ ಪ್ರಧಾನಿ ಮೋದಿ ನೀಡಿದ ಗ್ಯಾರಂಟಿ ಪೂರ್ಣಗೊಳಿಸಿದ್ದಾರೆ.



ಪ್ರತಿ ಮನೆಗೆ ನೀರು, ವಿದ್ಯುತ್, ಶೌಚಾಲಯ ಮೋದಿ ಯೋಜನೆ, ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆ, ಮುದ್ರಾ ಯೋಜನೆಯಂಥ ಗ್ಯಾರಂಟಿ ಯೋಜನೆ ನೀಡಿದ್ದಾರೆ ಎಂದರು.

ಮೋದಿ ಸರ್ಕಾರ ಸಾಮಾಜಿಕ ನ್ಯಾಯ ನೀಡುವ ಕೆಲಸ ಮಾಡಿದೆ. ಸಾಂಸ್ಕೃತಿಕವಾಗಿ, ಆರ್ಥಿಕವಾಗಿ, ಸಾಮಾಜಿಕವಾಗಿ ಅಭಿವೃದ್ಧಿ ಕಾರ್ಯ ಮಾಡುತ್ತಿದೆ. ತ್ರಿವಳಿ ತಲಾಕ್ ರದ್ದುಗೊಳಿಸಿ ಮಹಿಳಾ ನ್ಯಾಯ ನೀಡಿದೆ. ಮಹಿಳೆಯರಿಗೆ ಮೀಸಲಾತಿ ನೀಡುವ ಯೋಜನೆ, ಯುವಸಮೂಹಕ್ಕೆ ಸ್ಕಿಲ್ ಇಂಡಿಯಾ ಯೋಜನೆ ಜಾರಿಗೆ ತಂದಿದೆ ಎಂದು ತಿಳಿಸಿದರು.

ಕಿಸಾನ್ ಫಸಲ್ ವಿಮಾ, ಬ್ಯಾಂಕ್ ಸಾಲ ಸೇರಿ ಅನೇಕ ಗ್ಯಾರಂಟಿ ಯೋಜನೆ ನೀಡಲಾಗಿದೆ. ದೇಶಾದ್ಯಂತ ಗರೀಬ್ ಕಲ್ಯಾಣಕ್ಕಾಗಿ 5ಕೆಜಿ ಅಕ್ಕಿ ಉಚಿತ ಪಡಿತರ ನೀಡಲಾಗುತ್ತಿದೆ. ಅಂತ್ಯೋದಯ, ಗ್ರಾಮೋದಯ, ಸರ್ವೋದಯ ಬಿಜೆಪಿ, ಮೋದಿ ತತ್ವ. ಸಿಎಂ ಸಿದ್ಧರಾಮಯ್ಯ ಅವರಿಗೆ ನಾನು ಸವಾಲು ಹಾಕುತ್ತೇನೆ, ಯುಪಿಎ ಅವಧಿಯಲ್ಲಾದ ಒಂದೇ ಒಂದು ಅಭಿವೃದ್ಧಿ ತೋರಿಸಲಿ. ಆದರೆ ನಾವು ಮೋದಿ ಸರ್ಕಾರದಲ್ಲಿ ಅನೇಕ ಅಭಿವೃದ್ಧಿ ಕಾರ್ಯ ತೋರಿಸುತ್ತೇವೆ ಎಂದರು.

ಯುಪಿಎ ಆಡಳಿತದ ಹತ್ತು ವರ್ಷದಲ್ಲಿ ಹಗರಣಗಳ ಸರಣಿ ನಡೆದಿತ್ತು. ಆದರೆ ಮೋದಿ ಆಡಳಿತದಲ್ಲಿ ಯಾವುದೇ ಹಗರಣಗಳು ಇಲ್ಲ. ಯುಪಿಎ ಅವಧಿಯಲ್ಲಿ ಅನೇಕರು ಒಳಗೆ ಹೋಗಿದ್ದರು, ಕೆಲವರು ಹೊರಗೆ ಬಂದಿದ್ದಾರೆ. ಈಗ ಹೊರಗೆ ಇರುವವರೂ ಸಹ ಒಳಗೆ ಹೋಗುವವರಿದ್ದಾರೆ. ಕಾಂಗ್ರೆಸ್ ಪಕ್ಷದಲ್ಲಿ ನಾಯಕತ್ವವೇ ಇಲ್ಲ. ರಾಹುಲ್ ಗಾಂಧಿ ನಾಯಿಯನ್ನು ಜತೆಗೆ ಕರೆದೊಯ್ಯುತ್ತಾರೆ. ನಾಯಿ ತಿನ್ನದ ಬಿಸ್ಕತ್ತನ್ನು ಕಾರ್ಯಕರ್ತರಿಗೆ ನೀಡುತ್ತಿದ್ದಾರೆ ಎಂದು ದೂರಿದರು.

ರಾಜ್ಯದಲ್ಲಿ ಡಬಲ್ ಇಂಜಿನ್ ಸರ್ಕಾರವಿದ್ದಾಗ ಅಭಿವೃದ್ಧಿ ಆಗಿತ್ತು. ಆದರೆ ಕಾಂಗ್ರೆಸ್ ಆಡಳಿತಕ್ಕೆ ಬಂದಾಗಿಂದ ಅಭಿವೃದ್ಧಿಗೆ ಬ್ರೇಕ್ ಬಿದ್ದಿದೆ. ಅಭಿವೃದ್ಧಿಗಾಗಿ ಮತ್ತೊಮ್ಮೆ ಮೋದಿ ಸರ್ಕಾರ ಆಡಳಿತಕ್ಕೆ ಬರಬೇಕಿದೆ. ರಾಜ್ಯದಲ್ಲಿ ಎಲ್ಲಾ ಕ್ಷೇತ್ರಗಳಲ್ಲೂ ಬಿಜೆಪಿ ಗೆಲ್ಲುವ ಭರವಸೆಯಿದೆ.

ಪುಟ 2

## ಫಾಸ್ಟ್ ನ್ಯೂಸ್

### ಜನತಾ ದರ್ಶನ 11ಕ್ಕೆ ಮುಂದೂಡಿಕೆ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಜವನಗೊಂಡನಹಳ್ಳಿ ಗ್ರಾಮದ ನಾಡಕಚೇರಿ ಹತ್ತಿರದ ಗಣೇಶ ದೇವಸ್ಥಾನದ ಆವರಣದಲ್ಲಿ ಮಾರ್ಚ್ 9ರಂದು ಆಯೋಜಿಸಲಾಗಿದ್ದ ಜಿಲ್ಲಾಮಟ್ಟದ ಜನತಾ ದರ್ಶನ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವರ ಮೌಖಿಕ ಆದೇಶದ ಮೇರೆಗೆ ಕಾರ್ಯಕ್ರಮವನ್ನು ಮಾರ್ಚ್ 11ಕ್ಕೆ ಮುಂದೂಡಲಾಗಿದೆ. ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ಮಾರ್ಚ್ 11ರಂದು ರೈತರಿಗೆ ತರಬೇತಿ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಮಾರ್ಚ್ 11ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲೆಯ ರೈತರಿಗೆ ಸಮಗ್ರ ಕೃಷಿ ಪದ್ದತಿ ಮತ್ತು ವೈಜ್ಞಾನಿಕ ಕಳೆ ನಿರ್ವಹಣೆ ಕುರಿತು ರೈತರಿಗೆ ಒಂದು ದಿನದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಬೆಂಗಳೂರು ಜಿಕೆವಿಕೆ ಕೃಷಿ ವಿದ್ಯಾನಿಲಯದ ಸಮಗ್ರ ಕೃಷಿ ಪದ್ಧತಿಗಳ ವಿಭಾಗದ ಪ್ರಾಧ್ಯಾಪಕ ಡಾ.ಎಂ.ಟಿ.ಸಂಜಯ್ ಅವರು, ಸಮಗ್ರ ಕೃಷಿ ಪದ್ದತಿ ಮತ್ತು ವೈಜ್ಞಾನಿಕ ಕಳೆ ನಿರ್ವಹಣೆ ಕುರಿತು ವಿಷಯ ಮಂಡನೆ ಮಾಡುವರು. ಆಸಕ್ತ 50 ಜನ ರೈತಭಾಂದವರು ತರಬೇತಿಯಲ್ಲಿ ಭಾಗವಹಿಸಲು ಆರ್. ರಜನೀಕಾಂತ, ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಬಬ್ಬೂರು ಫಾರಂ (8277931058), ಎಂ.ಉಷಾರಾಣಿ, ಸಹಾಯಕ ಕೃಷಿ ನಿರ್ದೇಶಕರು (ರೈ.ಮ) 9980730696, ಟಿ.ಪಿ.ರಂಜಿತಾ, ಕೃಷಿ ಅಧಿಕಾರಿ (8277930959), ಸಿಕಂದರ್ ಬಾಷಾ, ಕೃಷಿ ಅಧಿಕಾರಿ (8277931058) ಮತ್ತು ಪವಿತ್ರಾ ಎಂ. ಜೆ. (9535412286) ಅವರ ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಕೋರಿದೆ. ಮೊದಲು ನೋಂದಾವಣಿ ಮಾಡಿಕೊಂಡ 50 ಜನ ರೈತಭಾಂದವರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು.

### ಮಾರ್ಚ್ 10ರಂದು ಮಹಿಳಾ ಸಾಧಕರಿಗೆ ಸನ್ಮಾನ ಸಮಾರಂಭ ಕಾರ್ಯಕ್ರಮ

» ಚಿತ್ರದುರ್ಗ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಶ್ರೀ ಬಸವೇಶ್ವರ ವಿದ್ಯಾಸಂಸ್ಥೆ, ರೈನ್ ಟ್ರಸ್ಟ್, ಸ್ವಯಂ ಸೇವಾ ಸಂಸ್ಥೆ ಮತ್ತು ವಿವಿಧ ಮಹಿಳಾ ಸ್ವ–ಸಹಾಯ ಸಂಘಗಳ ಸಂಯುಕ್ತಾಶ್ರಯದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಮತ್ತು ಮಹಿಳಾ ಸಾಧಕರಿಗೆ ಸನ್ಮಾನ ಸಮಾರಂಭವನ್ನು ಇದೇ ಮಾರ್ಚ್ 10ರಂದು ಬೆಳಿಗ್ಗೆ 10 ಗಂಟೆಗೆ ಚಿತ್ರದುರ್ಗ ನಗರದ ಮಠದ ಕುರುಬರಹಟ್ಟಿಯ ಬಸವೇಶ್ವರ ವಿದ್ಯಾಸಂಸ್ಥೆ ಆವರಣದಲ್ಲಿ ಆಯೋಜಿಸಲಾಗಿದೆ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಕೆ.ಬಿ.ಗೀತಾ ಕಾರ್ಯಕ್ರಮ ಉದ್ಘಾಟಿಸಿ, ಉಪನ್ಯಾಸ ನೀಡುವರು. ಬಸವೇಶ್ವರ ವಿದ್ಯಾಸಂಸ್ಥೆಯ ಅಧ್ಯಕ್ಷೆ ಪ್ರಭಾವತಿ ಶಂಕರಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಸದಸ್ಯ ಕಾರ್ಯದರ್ಶಿ ಎಂ. ವಿಜಯ್, ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ, ಅಪರಾಧಶಾಸ್ತ್ರದ ವಿಶ್ರಾಂತ ಪ್ರಾಧ್ಯಾಪಕ ಡಾ.ನಟರಾಜ್, ಸಾಮಾಜಿಕ ವಲಯ ಅರಣ್ಯಾಧಿಕಾರಿ ಐ.ಬಿ.ಅಕ್ಷತಾ, ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತುದಾರರಾದ ಪಿ.ಜೆ.ಅನಿತಾ ಲಕ್ಷ್ಮಿ ಆಚಾರ್ಯ, ಕೋಡೇನಹಟ್ಟಿ ಟಿ. ಸುಮ, ಕಸವನಹಳ್ಳಿ ರಮೇಶ್ ಭಾಗವಹಿಸುವರು.

# ಮ್ಯಾಸಬೇಡರ ಸಂಪ್ರದಾಯದ ವಿಶೇಷ ಗುಗ್ಗರಿ ಹಬ್ಬ

» ಚಳ್ಳಕೆರೆ

ತಾಲ್ಲೂಕಿನ ನನ್ನಿವಾಳ ಗ್ರಾಮದ ಮುತ್ತಯ್ಯಗಳಸ್ವಾಮಿ ಸನ್ನಿಧಿಯಲ್ಲಿ ವಿಶೇಷವಾಗಿ ಗುಗ್ಗರಿ ಹಬ್ಬವನ್ನು ನೂರಾರು ಭಕ್ತರ ಸಮ್ಮುಖದಲ್ಲಿ ಭಕ್ತಿಶ್ರದ್ಧೆಯಿಂದ ಆಚರಿಸಲಾಯಿತು. ಬುಡಕಟ್ಟು ಸಮುದಾಯದ ಮೂಲಸಂಪ್ರದಾಯ ಮತ್ತು ಆಚರಣೆ ಹಿನ್ನೆಲೆಯಲ್ಲಿ ಗುಗ್ಗರಿ ಹಬ್ಬ ಆಚರಿಸಲಿದ್ದು, ಈ ಭಾಗದ ಭಕ್ತರಿಗೆ ಇದೊಂದು ವಿಶೇಷ ಹಬ್ಬವಾಗಿರುತ್ತದೆ. ಗುಗ್ಗರಿಹಬ್ಬದ ದಿನದಂದು ವಿಶೇಷವಾಗಿ ದೇವರ ಎತ್ತುಗಳಿಗೆ ದಾಸಯ್ಯನವರು ಪೂಜೆ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುತ್ತದೆ. ದೇವರ ಎತ್ತುಗಳ ಸಮ್ಮುಖದಲ್ಲೇ ಎಲ್ಲಾ ದಾಸಯ್ಯರು ಸಾಲಾಗಿ ನಿಂತು ಜಾಗಟೆ, ಶಂಖನಾಥವನ್ನು ಮಾಡುತ್ತಾರೆ. ದೇವರ ಎತ್ತುಗಳು ಸಹ ದಾಸಯ್ಯನವರ ಶಂಖನಾಥಕ್ಕೆ ತಲೆದೂಗುತ್ತವೆ. ಈ ಸಂಪ್ರದಾಯ ಹಲವಾರು ದಶಕಗಳಿಂದ ನಡೆಯುತ್ತಾ ಬಂದಿದೆ ಎಂದು ಗ್ರಾಮದ ಮುಖಂಡ ದೊರೆಬೈಯಣ್ಣ ತಿಳಿಸಿದರು.

ಪುಟ 2



# ಎರಡ್ಮೂರು ತಿಂಗಳಲ್ಲಿ ಪ್ರತಿಯೊಂದು ಗ್ರಾಮಕ್ಕೂ ಕುಡಿಯುವ ನೀರಿನ ವ್ಯವಸೆ: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ



ತುಂಗಭದ್ರ ಹಿನ್ನೀರು ಯೋಜನೆ ಮೂಲಕ ಎರಡ್ಮೂರು ತಿಂಗಳಲ್ಲಿ ಕ್ಷೇತ್ರದ ಪ್ರತಿಯೊಂದು ಗ್ರಾಮಕ್ಕೂ ಕುಡಿಯುವ ನೀರಿನ ವ್ಯವಸ್ಥೆ ಆಗಲಿದೆ ಎಂದು ರಾಜ್ಯ ಸಣ್ಣ ಕೈಗಾರಿಕಾಅಭಿವೃದ್ಧಿ ಮಂಡಳಿ ಅಧ್ಯಕ್ಷ, ಶಾಸಕ ಟಿ.ರಘುಮೂರ್ತಿ ತಿಳಿಸಿದರು. ನಗರದ ನಗರಸಭಾ ಕಾರ್ಯಾಲಯದ ಆವಣದಲ್ಲಿ ಗುರುವಾರ ಕಂದಾಯ ಇಲಾಖೆ, ಕೊಳಗೇರಿ ಅಭಿವೃದ್ಧಿ ಮಂಡಳಿವತಿಯಿಂದ ಏರ್ಪಡಿಸಿದ್ದ ಹಂಚಿಕಾತಿ ಪತ್ರ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಪುಟ 3

**ಪ್ರಮುಖ ಸುದ್ದಿ**

# ಸಮರ್ಪಕ ವಿದ್ಯುತ್ ಪೂರೈಕೆಗಾಗಿ ಬೆಸ್ಕಾಂ ಶಾಖೆಗೆ ಮುಳ್ಳಿನ ಎತ್ತಿನ ಗಾಡಿ ಅಡ್ಡ ನಿಲ್ಲಿಸಿ ರೈತರ ಪ್ರತಿಭಟನೆ

» ಪರಶುರಾಂಪುರ

ರೈತರ ಕೃಷಿ ಪಂಪ್ ಸೆಟ್‌ಗಳಿಗೆ ಇಲಾಖೆಯಿಂದ ನಿಗದಿತವಾದ ವಿದ್ಯುತ್ ಐದೈದು ನಿಮಿಷಕ್ಕೆ ವ್ಯತ್ಯಾಸವಾಗುವುದರ ನಡುವೆ ಸರಿಯಾಗಿ ಪೂರೈಕೆ ಆಗುತ್ತಿಲ್ಲ ಎಂದು ರೈತರು ಬೆಸ್ಕಾಂ ಶಾಖೆಗೆ ಅಡ್ಡಲಾಗಿ ಮುಳ್ಳಿನ ಎತ್ತಿನ ಗಾಡಿಯನ್ನ ನಿಲ್ಲಿಸಿ ಪ್ರತಿಭಟನೆ ನಡೆಸಿದ ಘಟನೆ ಗುರುವಾರ ನಡೆದಿದೆ.

ಮಳೆ ಇಲ್ಲದೆ ಬಿತ್ತಿದ ಬೆಳೆ ಒಣಗುತ್ತಿವೆ.ಪಂಪ್ ಸೆಟ್ ಮೂಲಕ ನೀರು ಹಾಯಿಸಿ ಕೈಗೆ ಬಂದ ಬೆಳೆ ಬದುಕಿಸಿಕೊಳ್ಳಬೇಕೆಂದರೆ ಸರಿಯಾಗಿ ವಿದ್ಯುತ್ ನೀಡುತ್ತಿಲ್ಲ.ಇದರಿಂದ ಸಂಕಷ್ಟ ಅನುಭವಿಸುವಂತ ಪರಿಸ್ಥಿತಿಯಾಗಿದೆ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.

ಕಾಲುವೆಯಲ್ಲಿ ನೀರು ಹರಿಯದೆ ಐದೈದು ನಿಮಿಷಕ್ಕೆ ಕರೆಂಟ್ ಹೋದರೆ ಬೆಳೆ ಹೇಗೆ ಉಳಿಯುತ್ತೆ,ಬರೀ ಸ್ಟಾಟ್ರ ಹತ್ತಿರ ಕುಳಿತು ಆನ್ ಅಂಡ್ ಆಫ್ ಕೆಲಸವಾದರೆ ಬೆಳೆಗೆ ಮಾಡಿದ ಸಾಲ ಮತ್ತಷ್ಟು ಏರುವುದೇ ಹೊರತೂ ಮತ್ತೇನು ಸರ್ ಎಂದು ರೈತ ಖಾದರ್ ಭಾಷ ತಮ್ಮ ಅಳಲನ್ನು ತೋಡಿಕೊಂಡರು.



ಬರೀ ನಿಮ್ಮದೇ ತಾಂತ್ರಿಕ ಕಾರಣ ಹಾಗೂ ಲೋ ಅಂಡ್ ಓವರ್ ಲೋಡುಗೂ ಮೋಟಾರ್ ಸುಟ್ಟು ರಿಪೇರಿಗೆ ಹೆಂಡತಿ ಮಕ್ಕಳ ಒಡವೆ ಅಡಿ ಇಡುತ್ತಿದ್ದೇವೆ. ನಮ್ಮಗಳ ಕಷ್ಟ ನಿಮಗಂತು ಅಥ9ವಾಗುವುದಿಲ್ಲ ಎಂದು ರೈತರು ತಮ್ಮ ನೋವನ್ನ ವ್ಯಕ್ತಪಡಿಸಿದರು.

ಈ ವೇಳೆಯಲ್ಲಿ ಪಿಎಸ್ಐ ಪ್ರಶಾಂತ್ ಕುಮಾರ್ ಮಧ್ಯೆ ಪ್ರವೇಶಿಸಿ ಮುಳ್ಳಿನ ಗಾಡಿಯನ್ನು ತೆರವುಗೊಳಿಸಿದರು. ಬಳಿಕ ಶಾಖೆಯ ಎಸ್ ಓ ಶಿವಕುಮಾರ್ ಮಾತನಾಡಿ,ರೈತರ ಅಹವಾಲು ಜತೆ ತಾಂತ್ರಿಕವಾದ ಸಮಸ್ಯೆ ತಿಳಿಸುತ್ತಾ,ಮುಂದಿನ ಮೂರು ದಿನಗಳ ಕಾಲದಲ್ಲಿ ಸರಿಪಡಿಸಲಾಗುವುದು ಎಂದು ತಿಳಿಸಿದರು.ಬಳಿಕ ಪ್ರತಿಭಟನೆ ಹಿಂಪಡೆದು ಈ ಸಮಸ್ಯೆಯು ಮುಂದುವರಿದಲ್ಲಿ ಉಗ್ರ ಹೋರಾಟದ ರೂಪುರೇಷೆಗಳನ್ನು ರೂಪಿಸಲಾಗುವುದು ಎಚ್ಚರಿಸಿದರು.

ಈ ವೇಳೆಯಲ್ಲಿ ಅಖಂಡ ಕರ್ನಾಟಕ ರಾಜ್ಯ ರೈತ ಸಂಘದ ತಾಲೂಕು ಉಪಾಧ್ಯಕ್ಷ ಜಂಪಜ್ಜ,ಕಾರ್ಯದರ್ಶಿ ಚೌಳೂರು ಪ್ರಕಾಶ್,ಹೋಬಳಿ ಘಟಕದ ಅಧ್ಯಕ್ಷ ನವೀನ್ ಗೌಡ, ಉಪಾಧ್ಯಕ್ಷ ಪರಮೇಶ್ವರಪ್ಪ, ಗೋಸಿಕೆರೆ ರಾಜಣ್ಣ,ಅಣ್ಣಪ್ಪ,ಖಾದರ್ ಭಾಷ, ರಾಮಚಂದ್ರಪ್ಪ, ಕುಮಾರ್ ಸೇರಿದಂತೆ ವಿವಿಧ ಗ್ರಾಮಗಳ ರೈತರು,ಸಾರ್ವಜನಿಕರು,ಪೊಲೀಸ್ ಸಿಬ್ಬಂಧಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕಾಂಗ್ರೆಸ್ ಪಕ್ಷದಲ್ಲಿ ನಾಯಕತ್ವವೇ ಇಲ್ಲ

» ಮೊದಲ ಪುಟದಿಂದ

ಪ್ರಧಾನಿ ಮೋದಿ ನೀಡಿದ ಗ್ಯಾರಂಟಿ ಪೂರ್ಣಗೊಳಿಸುತ್ತಾರೆ ಎಂದರು.ಕಾಂಗ್ರೆಸ್ ಸುಳ್ಳು ಗ್ಯಾರಂಟಿ ಘೋಷಿಸಿ ಅಧಿಕಾರಕ್ಕೆ ಬಂದಿದೆ. ಕರ್ನಾಟಕ ರಾಜ್ಯದ ಜನರಿಗೆ ಈಗಾಗಲೇ ಅನುಭವಕ್ಕೆ ಬಂದಿದೆ. ಕಾಂಗ್ರೆಸ್ ಚುನಾವಣೆಗೆ ಮುನ್ನ ಘೋಷಿಸಿದ ಒಂದು ಗ್ಯಾರಂಟಿಯೂ ಪೂರ್ಣಗೊಳಿಸಿಲ್ಲ. ಕರ್ನಾಟಕದ ಜನ ಈಗ ಪಶ್ಚಾತ್ತಾಪ ಪಡುವಂತಾಗಿದೆ. ಮತ್ತೊಮ್ಮೆ ಡಬಲ್‌ಇಂಜಿನ್ ಸರ್ಕಾರ ಶೀಘ್ರ ಬರುವ ವಿಶ್ವಾಸವಿದೆ ಎಂದು ತಿಳಿಸಿದರು.70 ವರ್ಷದಲ್ಲಿ ಕಾಂಗ್ರೆಸ್ ಸರ್ಕಾರ ಮಾಡಲಾಗದ ಸಾಧನೆ ಮೋದಿ ಕಾಲದಲ್ಲಾಗಿದೆ. ಎಲ್ಲಾ ವಿಭಾಗದಲ್ಲೂ ಅಭಿವೃದ್ಧಿ ಕಾರ್ಯಕ್ರಮಗಳಾಗಿವೆ. ರಾಜ್ಯದ 28ಕ್ಕೆ 28 ಕ್ಷೇತ್ರದಲ್ಲಿ ಎನ್‌ಡಿಎಗೆ ಮೋದಿಗೆ ಗೆಲುವಾಗಲಿದೆ. ಬಿಜೆಪಿ ಜಾತಿ, ಧರ್ಮದ ಹೆಸರಿನಲ್ಲಿ ವಿಭಜನೆ ಮಾಡುವುದಿಲ್ಲ. ಸಬ್ ಕಾ ಸಾಥ್ ಸಬ್ ಕಾ ವಿಕಾಸ್ ಬಿಜೆಪಿಯ ಮೂಲಮಂತ್ರ. ಆದರೆ ಕಾಂಗ್ರೆಸ್ ಜನರನ್ನು ವಿಭಜನೆ ಮಾಡುತ್ತದೆ. ಕಾಂಗ್ರೆಸ್ ಅಂದರೆ ಸ್ಕ್ಯಾಮ್, ಕಾಂಗ್ರೆಸ್ ಅಂದರೆ ಭ್ರಷ್ಟಾಚಾರ ಎಂದು ದೂರಿದರು.ಬೆಂಗಳೂರಿನ ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಸ್ಫೋಟವಾಗಿದ್ದು ಆರಂಭವಿದು. ಕಾಂಗ್ರೆಸ್ ಕಾಲದಲ್ಲಿ ಈ ಹಿಂದಿನಂಥ ಸ್ಥಿತಿ ನಿರ್ಮಾಣ. ಕಾಂಗ್ರೆಸ್ ಮನೆಗೆ ಕಳಿಸಿ ಡಬಲ್ ಇಂಜಿನ್ ಸರ್ಕಾರ ತನ್ನಿ. ರಾಜ್ಯದಲ್ಲಿ ಬಿಜೆಪಿ ಸರ್ಕಾರವಿದ್ದರೆ ಬಾಂಬ್ ಸ್ಫೋಟ ಆಗುತ್ತಿರಲಿಲ್ಲ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆಯೇ ಇಲ್ಲದಂತಾಗಿದೆ. ಶೀಘ್ರದಲ್ಲೇ ರಾಜ್ಯದ ಲೋಕಸಭೆ ಬಿಜೆಪಿ ಅಭ್ಯರ್ಥಿಗಳ ಘೋಷಣೆ ಆಗಲಿದೆ. ಪೊಲೀಸರಿಗೆ ಫ್ರೀಹ್ಯಾಂಡ್ ಇಲ್ಲದ ಕಾರಣ ಬಾಂಬರ್ ಬಂಧನ ವಿಳಂಬ. ಬಾಂಬರ್ ಬಂಧನ ವಿಚಾರದಲ್ಲಿ ರಾಜಕೀಯ ಹಸ್ತಕ್ಷೇಪ ಆಗುತ್ತಿದೆ ಎಂದರು.ಕೇಂದ್ರ ಸಚಿವ ಎ.ನಾರಾಯಣಸ್ವಾಮಿ, ಮಾಜಿ ಶಾಸಕರಾದ ಜಿ.ಎಚ್.ತಿಪ್ಪಾರೆಡ್ಡಿ, ಪರಿಷತ್ ಸದಸ್ಯರಾದ ಕೆ.ಎಸ್.ನವೀನ್, ಚಿದಾನಂದ ಗೌಡ, ಶಿವಮೊಗ್ಗ ಶಾಸಕ ಚನ್ನಬಸಪ್ಪ, ಮಾಜಿ ಸಚಿವ ಭೈರತಿ ಬಸವರಾಜು, ಮಾಜಿ ಶಾಸಕರಾದ ನೇರ್ಲಗುಂಟೆ ತಿಪ್ಪೇಸ್ವಾಮಿ, ಜಿಲ್ಲಾಧ್ಯಕ್ಷ ಎ.ಮುರಳಿ, ಹನುಮಂತೇಗೌಡ, ಅನಿಲ್ ಕುಮಾರ್, ಸಿದ್ದಾಪುರದ ಸುರೇಶ್ ಇದ್ದರು.

### ಮ್ಯಾಸಬೇಡರ ಸಂಪ್ರದಾಯದ ವಿಶೇಷ ಗುಗ್ಗರಿ ಹಬ್ಬ



» ಮೊದಲ ಪುಟದಿಂದ

ಈ ಕಾರ್ಯಕ್ರಮ ವೈಶಿಷ್ಟ್ಯವೆಂದರೆ ಅತ್ತೆ, ಸೊಸೆ ಡಿಕ್ಕಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತದೆ. ಈ ಸಂದರ್ಭದಲ್ಲಿ ನೂರಾರು ಅತ್ತೆ, ಸೊಸೆಯವರು ಸ್ಥಳದಲ್ಲಿ ಹಾಜರಿದ್ದು, ಪೂಜೆಯ ನಂತರ ಅತ್ತೆ, ಸೊಸೆ ಡಿಕ್ಕಿ ಕಾರ್ಯವನ್ನು ಮುಂದುವರೆಸುತ್ತಾರೆ. ಈ ಕಾರ್ಯಕ್ರಮವನ್ನು ವೀಕ್ಷಿಸಲು ಹೆಚ್ಚಿನ ಸಂಖ್ಯೆಯಲ್ಲಿ ಮಹಿಳಾ ಭಕ್ತರು ಕಾರ್ಯಕ್ರಮಕ್ಕೂ ಮುನ್ನವೇ ಸ್ಥಳದಲ್ಲಿ ಠಿಕಾಣಿಹೂಡಿರುತ್ತಾರೆ.

ಗುಗ್ಗರಿ ಹಬ್ಬದ ಮತ್ತೊಂದು ವಿಶೇಷವೆಂದರೆ ಮುತ್ತಯ್ಯಗಳಸ್ವಾಮಿ ಮಣೇವು ಕಾರ್ಯದಲ್ಲಿ ದಾಸಯ್ಯಗಳು ಮಣ್ಣಿನ ನೆಲದ ಮೇಲೆ ಮಲಗಿ ಮಣೇವು ಪೂಜೆ ಸಲ್ಲಿಸುತ್ತಾರೆ. ಈ ದೃಶ್ಯವನ್ನು ಕಣ್ತುಂಬಿಕೊಳ್ಳಲು ಸುತ್ತಮುತ್ತಲ ನನ್ನಿವಾಳಕಟ್ಟೆಮನೆಯ ಸಾವಿರಾರು ಭಕ್ತರು ಆಗಮಿಸಿ ನಿಶಬ್ದದಿಂದ ಮಣೇವು ಕಾರ್ಯಕ್ರಮವನ್ನು ವೀಕ್ಷಿಸುತ್ತಾರೆ.

### ಮಾರ್ಚ್ 15ರಂದು ವಿಭಾಗೀಯ ಡಾಕ್ ಅದಾಲತ್

» ಚಿತ್ರದುರ್ಗ

ಚಿತ್ರದುರ್ಗ ಅಂಚೆ ವಿಭಾಗೀಯ ಡಾಕ್ ಅದಾಲತನ್ನು ಇದೇ ಮಾರ್ಚ್ 15ರಂದು ಸಂಜೆ 4ಗಂಟೆಗೆ ಚಿತ್ರದುರ್ಗ ನಗರದ ಕೋಟೆ ರಸ್ತೆಯ ಕಾಮನಬಾವಿ ಬಡಾವಣೆಯ ಫಿಲ್ಟರ್ ಹೌಸ್ ಹತ್ತಿರದ ಚಿತ್ರದುರ್ಗ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ನಡೆಸಲಾಗುವುದು. ಸಾರ್ವಜನಿಕರು ಮತ್ತು ಅಂಚೆ ಗ್ರಾಹಕರು ಅಂಚೆ ಸೇವೆಗಳಿಗೆ ಸಂಬಂಧಿಸಿದ ದೂರುಗಳನ್ನು ಮತ್ತು ಸಲಹೆಗಳನ್ನು ಮಾರ್ಚ್ 12 ರಂದು ಅಥವಾ ಅದಕ್ಕಿಂತ ಮುಂಚಿತವಾಗಿ ಅಂಚೆ ಅಧೀಕ್ಷಕರ ಕಚೇರಿ, ಕೋಟೆ ರಸ್ತೆ, ಫಿಲ್ಟರ್ ಹೌಸ್ ಹತ್ತಿರ, ಕಾಮನ ಬಾವಿ ಬಡಾವಣೆ ಇವರಿಗೆ ಮುಂದಿನ ಕ್ರಮಕ್ಕಾಗಿ ತಲಪುವಂತೆ ಕಳುಹಿಸಬೇಕು ಎಂದು ಚಿತ್ರದುರ್ಗ ವಿಭಾಗದ ಅಂಚೆ ಅಧೀಕ್ಷಕ ಚಂದ್ರಶೇಖರ್ ತಿಳಿಸಿದ್ದಾರೆ.

---

### ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ತ್ರೈ ಮಾಸಿಕ ಕೆಡಿಪಿ

# ನೀರು, ಮೇವಿನ ಸಮಸ್ಯೆಯಾಗದಂತೆ ಕ್ರಮ

» ದಾವಣಗೆರೆ

ಬರಗಾಲದಿಂದ ಈ ವರ್ಷ ಕುಡಿಯುವ ನೀರಿಗೆ ಸಮಸ್ಯೆಯಾಗಲಿದ್ದು ಕುಡಿಯುವ ನೀರುಪೂರೈಕೆಮತ್ತುಮೇವಿನಪೂರೈಕೆಗಾಗಿ ಎಲ್ಲಾ ಸಿದ್ದತೆಗಳನ್ನು ಮಾಡಿಕೊಂಡಿದ್ದು ಜನರಿಗೆ ತೊಂದರೆಯಾಗದಂತೆ ಬರ ನಿರ್ವಹಣೆ ಮಾಡಲಾಗುತ್ತದೆ ಎಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಏರ್ಪಡಿಸಲಾದ ಕೆಡಿಪಿ ತ್ರೈಮಾಸಿಕ ಸಭೆಯಲ್ಲಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ವೇಳೆ ಮಾತನಾಡಿದರು. ಜಿಲ್ಲೆಯಲ್ಲಿ ಇಲ್ಲಿಯವರೆಗೆ 22 ಗ್ರಾಮಗಳಲ್ಲಿ 27 ಖಾಸಗಿ ಕೊಳವೆಬಾವಿಗಳನ್ನು ಬಾಡಿಗೆ ಆಧಾರದ ಮೇಲೆ ಪಡೆದು ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ. ಮತ್ತು ಎಲ್ಲೆಲ್ಲಿ ಪ್ಲೋರೈಡ್‌ಯುಕ್ತ ನೀರು ಇದೆ ಅಂತಹ ಕಡೆ ಒಳ್ಳೆಯ ನೀರು ಪೂರೈಕೆ ಮಾಡಲು ಟ್ಯಾಂಕರ್ ಬಳಸಬೇಕು ಮತ್ತು ಶುದ್ದ ಕುಡಿಯುವ ನೀರಿನ ಘಟಕಗಳನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳಲು ಸೂಚನೆ ನೀಡಿದರು. ಈ ವೇಳೆ ಚನ್ನಗಿರಿ ಶಾಸಕ ಬಸವರಾಜ ವಿ.ಶಿವಗಂಗಾ ಮಾತನಾಡಿ ನೀರು ಪೂರೈಕೆಗೆ ಟ್ಯಾಂಕರ್ ಬಳಕೆಗೆ ಅನುಮತಿ ನೀಡಿದ್ದು ಜಿಪಿಎಸ್ ಅಳವಡಿಸಿದ ಟ್ಯಾಂಕರ್ ಬಾಡಿಗೆ ಪಡೆಯಲು ಷರತ್ತು ವಿಧಿಸಿದ್ದು ಇದರಿಂದ ಟ್ಯಾಂಕರ್ ಸಿಗುತ್ತಿಲ್ಲ ಎಂದಾಗ ಯಾವ ಟ್ಯಾಂಕರ್ ಪಡೆಯಲಾಗುತ್ತದೆ, ಅದೇ ಟ್ಯಾಂಕರ್‌ಗೆ ಜಿಪಿಎಸ್ ಅಳವಡಿಸಿಕೊಳ್ಳಬೇಕೆಂದರು.

ಜಿಲ್ಲೆಯ ಬಹುಗ್ರಾಮ ಕುಡಿಯುವ ಯೋಜನೆ ಮತ್ತು ಚಿತ್ರದುರ್ಗಕ್ಕೆ ಶಾಂತಿಸಾಗರದಿಂದ ಕುಡಿಯುವ ನೀರು ಪೂರೈಕೆಯಾಗುತ್ತಿದ್ದು ಶಾಂತಿಸಾಗರದ



ನೀರು ಕಡಿಮೆಯಾಗುತ್ತಿದೆ ಎಂದು ಚನ್ನಗಿರಿ ಶಾಸಕರು ಪ್ರಸ್ತಾಪಿಸಿದರು. ಈ ವೇಳೆ ಜಿಲ್ಲಾ ಸಚಿವರು ಶಾಂತಿಸಾಗರ ಕುಡಿಯುವ ನೀರಿಗೂ ಆದ್ಯತೆ ನೀಡಬೇಕು ಮತ್ತು ಅಚ್ಚುಕಟ್ಟು ಪ್ರದೇಶದ ಕೊನೆ ಭಾಗದ ರೈತರಿಗೂ ನೀರು ಕೊಡುವ ಮೂಲಕ ಬೆಳೆದಿರುವ ತೋಟಗಾರಿಕೆ ಬೆಳೆಗಳನ್ನು ಉಳಿಸಬೇಕಾಗಿದೆ. ಇದಕ್ಕಾಗಿ ಮುಂದಿನ ಎರಡು ಹಂತದಲ್ಲಿ ನೀರು ಬಿಡುಗಡೆ ಮಾಡುವ ವೇಳೆ ಕೊನೆ ಭಾಗದ ರೈತರಿಗೆ ಮೊದಲ ಆದ್ಯತೆಯಾಗಿ ನೀರು ಕೊಡಲು ಎಲ್ಲಾ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ. ಮತ್ತು ಕುಡಿಯುವ ನೀರಿನ ಪೂರೈಕೆಗೂ ಆದ್ಯತೆಯನ್ನು ನೀಡಲಾಗುತ್ತದೆ ಎಂದರು.

**ಗ್ಯಾರಂಟಿ ಯೋಜನೆಗಳ ಸಮೀಕ್ಷೆ;** ಗ್ಯಾರಂಟಿ ಯೋಜನೆಗಳ ಸಮೀಕ್ಷೆ ನಡೆಸಲಾಗುತ್ತಿದ್ದು ಯಾರಿಗೆ ಈ ಯೋಜನೆಗಳನ್ನು ಪಡೆಯಲು ಸಾಧ್ಯವಾಗುತ್ತಿಲ್ಲ ಎಂಬ ಬಗ್ಗೆ ಪರಿಶೀಲನೆ ಕೈಗೊಂಡು ಪರಿಹರಿಸುವ ಕೆಲಸ ಮಾಡಲಾಗುತ್ತದೆ. ಗೃಹಲಕ್ಷ್ಮಿ ಯೋಜನೆಯಡಿ ಕೆಲವು ತಾಂತ್ರಿಕ ಸಮಸ್ಯೆಯಿಂದ ಮೊದಲ ತಿಂಗಳು ಎರಡು ಸಾವಿರ ಬಂದವರಿಗೆ ನಂತರದ ತಿಂಗಳಲ್ಲಿ ಬಂದಿರುವುದಿಲ್ಲ, ಆಧಾರ್ ಜೋಡಣೆ, ಬ್ಯಾಂಕ್ ಕೆವೈಸಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಜಿಲ್ಲಾಧಿಕಾರಿಯವರು ತಾಂತ್ರಿಕ ಪರಿಣಿತರೊಂದಿಗೆ ಅಭಿಯಾನದ ರೀತಿ ಸಮಸ್ಯೆ ಇತ್ಯಾರ್ಥಕ್ಕೆ ಕ್ರಮ ವಹಿಸಲು ಜಿಲ್ಲಾ ಉಸ್ತುವಾರಿ ಸಚಿವರು ತಿಳಿಸಿದರು.

ಅನಿರೀಕ್ಷಿತ ಭೇಟಿ ನೀಡಲು ಸಲಹೆ; ಕೆಲವು ನ್ಯಾಯಬೆಲೆ ಅಂಗಡಿಗಳಲ್ಲಿ ಒಂದು ಕೆಜಿ ವರೆಗೆ ಅಕ್ಕಿಯನ್ನು ಕಡಿಮೆ ಕೊಡುತ್ತಿರುವ ದೂರುಗಳಿವೆ ಎಂದು ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪನವರು ಪ್ರಸ್ತಾಪಿಸಿದಾಗ ನ್ಯಾಯಬೆಲೆ ಅಂಗಡಿಗಳಿಗೆ ಆಹಾರ ಇಲಾಖೆ ಅಧಿಕಾರಿಗಳೊಂದಿಗೆ ಅನಿರೀಕ್ಷಿತ ಭೇಟಿ ನೀಡುವ ಮೂಲಕ ಪರಿಶೀಲನೆ ನಡೆಸಲು ತಿಳಿಸಿ ಪ್ರಮಾಣಕ್ಕಿಂತ ಕಡಿಮೆ ಆಹಾರಧಾನ್ಯ ವಿತರಣೆ ಮಾಡುತ್ತಿದ್ದಲ್ಲಿ ಅಂತಹ ನ್ಯಾಯಬೆಲೆ ಅಂಗಡಿಗಳ ಮೇಲೆ ಕ್ರಮ ಜರುಗಿಸಲು ಸೂಚನೆ ನೀಡಿದರು.

**ಕೆರೆ ಒತ್ತುವರಿಗೆ ಕ್ರಮ;** ಹೊನ್ನಾಳಿ ಶಾಸಕರಾದ ಡಿ.ಜಿ.ಶಾಂತನಗೌಡರವರು ಕೆಲವರು ಕೆರೆ ಒತ್ತುವರಿ ಮಾಡುವ ಜೊತೆಗೆ ಸ್ಮಶಾನವನ್ನು ಒತ್ತುವರಿ ಮಾಡಿದ್ದಾರೆ ಎಂದಾಗ ಸರ್ಕಾರಿ ಜಾಗವನ್ನು ಗುರುತಿಸಿ ಒತ್ತುವರಿ ಮಾಡದಂತೆ ಬೀಟ್ ವ್ಯವಸ್ಥೆಯನ್ನು ಮಾಡಲಾಗುತ್ತದೆ. ಮತ್ತು ಕೆರೆ ಒತುವರಿ ಬಗ್ಗೆ ಜಿಲ್ಲಾಧಿಕಾರಿಯವರು ಕ್ರಮ ಕೈಗೊಳ್ಳುವರೆಂದು ತಿಳಿಸಿದರು.

**ಶಿಕ್ಷಣ ಮತ್ತು ಆರೋಗ್ಯ;** ಶಿಕ್ಷಣ ಇಲಾಖೆಯಲ್ಲಿ ಕೊಠಡಿಗಳ ಸಮಸ್ಯೆ ಇದ್ದು ಪಾಳುಬಿದ್ದಿರುವ ಕೊಠಡಿಯನ್ನು ಸಂಪೂರ್ಣವಾಗಿ ತೆರವು ಮಾಡಬೇಕು. ಶಾಲೆಗಳಲ್ಲಿ ಗ್ರೂಪ್ ಡಿ. ಸಿಬ್ಬಂದಿಯ ಸಮಸ್ಯೆಯಿಂದ ನಿರ್ವಹಣೆ ಕಷ್ಟವಾಗಿದ್ದು ಇದಕ್ಕೆ ಪರಿಹಾರ ಕಂಡುಕೊಳ್ಳಲಾಗುತ್ತದೆ. ಪ್ರತಿಯೊಂದು ಶಾಲೆಯಲ್ಲಿ ಶೌಚಾಲಯ, ಆಟದ ಮೈದಾನ, ಕುಡಿಯುವ ನೀರು ಒದಗಿಸಬೇಕು. ಒಂದೇ ಮಾದರಿಯಲ್ಲಿ ಎಲ್ಲಾ ಶಾಲೆಗಳಲ್ಲಿ ಶೌಚಾಲಯವನ್ನು ನಿರ್ಮಾಣ ಮಾಡಲು ಒಂದೇ ಏಜೆನ್ಸಿ ಮೂಲಕ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಆರೋಗ್ಯ ಇಲಾಖೆಯಿಂದ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ಡಯಾಲೀಸಿಸ್ ಆರಂಭಿಸಲಾಗಿದೆ, ಚಿಗಟೇರಿಯಲ್ಲಿ 10 ಯುನಿಟ್‌ಗಳು ಕಾರ್ಯನಿರ್ವಹಿಸುತ್ತಿವೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಸಭೆಗೆ ತಿಳಿಸಿದಾಗ ಮಾಯಕೊಂಡ ಶಾಸಕರಾದ ಬಸವಂತಪ್ಪನವರು ಡಯಾಲೀಸಿಸ್ ನಿರ್ವಹಣೆಗೆ ನೀಡುವ ಹೊರಗುತ್ತಿಗೆ ಸಂಸ್ಥೆಯವರು ಕೆಲವೇ ವಸ್ತುಗಳನ್ನು ನೀಡಿ ಇನ್ನುಳಿದವುಗಳನ್ನು ಹೊರಗಿನಿಂದ ತರಲು ಹೇಳುತ್ತಿದ್ದಾರೆ ಎಂಬ ದೂರುಗಳಿವೆ.

ಈ ಬಗ್ಗೆ ಕ್ರಮ ವಹಿಸಬೇಕೆಂದಾಗ ಸಚಿವರು ಇದನ್ನು ಪರಿಶೀಲಿಸಿ ಕ್ರಮ ವಹಿಸಲು ಮತ್ತು ಚಿಗಟೇರಿ ಆಸ್ಪತ್ರೆಯಲ್ಲಿ ಸಿಬ್ಬಂದಿಯವರು ಮೊಬೈಲ್ ಕರೆ ಮಾಡಿದಾಗ ಜನಪ್ರತಿನಿಧಿಗಳು ಮಾತನಾಡುತ್ತಾರೆ ಎಂದು ಜನರು ಹೇಳಿದರೂ ಸೌಜನ್ಯಯುತವಾಗಿ ವರ್ತಿಸುವುದಿಲ್ಲ ಎಂದಾಗ ಸಚಿವರು ಎಲ್ಲಾ ಸಿಬ್ಬಂದಿಗಳ ಜೊತೆಗೆ ಚಿಗಟೇರಿ ಆಸ್ಪತ್ರೆಯಲ್ಲಿ ಸಭೆ ಮಾಡಿ ನಿರ್ದೇಶನ ನೀಡಲಾಗುತ್ತದೆ ಎಂದರು. ಹರಿಹರ ಶಾಸಕರಾದ ಬಿ.ಪಿ.ಹರೀಶ್ ಅವರು ಉಕ್ಕಡಗಾತ್ರಿಯಲ್ಲಿ ಮಾನಸಿಕವಾಗಿ ನೊಂದವರು ಹೆಚ್ಚು ಜನರು ಬರುತ್ತಾರೆ, ಇಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಖಾಯಂ ವೈದ್ಯರನ್ನು ನೇಮಕ ಮಾಡಲು ತಿಳಿಸಿದಾಗ ಖಾಯಂ ವೈದ್ಯರನ್ನು ನೇಮಕ ಮಾಡಲಾಗಿದೆ ಎಂದು ಆರೋಗ್ಯಾಧಿಕಾರಿಯವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಡಾ; ವೆಂಟಕೇಶ್ ಎಂ.ವಿ, ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

---

# ತಿಪ್ಪಾರೆಡ್ಡಿಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ವಿಜ್ಞಾನ ಮತ್ತು ಗಣಿತ ಪ್ರಯೋಗಾಲಯ ಉದ್ಘಾಟನೆ

### ದಾನಿಗಳ ನೆರವಿಗೆ ಶಿಕ್ಷಣ ಇಲಾಖೆ ಪರವಾಗಿ ಅಭಿನಂದನೆ : ಬಿಇಒ ಕೆ.ಎಸ್.ಸುರೇಶ್

» ಚಳ್ಳಕೆರೆ

ಈ ಗ್ರಾಮದ ಸರ್ಕಾರಿ ಪ್ರೌಢಶಾಲೆಗೆ ಗ್ರಾಮ ಪಂಚಾಯಿತಿ ಆಡಳಿತ ಅಂದಾಜು 49 ಸಾವಿರ ವೆಚ್ಚದಲ್ಲಿ ವಿಜ್ಞಾನ ಮತ್ತು ಗಣಿತ ಪ್ರಯೋಗಾಲಯದ ವಸ್ತುಗಳನ್ನು ಕೊಡುಗೆಯಾಗಿ ನೀಡುವ ಮೂಲಕ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಸಹಕರಿಸಿದ್ದು, ಶಿಕ್ಷಣ ಇಲಾಖೆ ಪರವಾಗಿ ಗ್ರಾಮ ಪಂಚಾಯಿತಿ ಆಡಳಿತವನ್ನು ಅಭಿನಂದಿಸುವುದಾಗಿ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ಗುರುವಾರ ತಿಪ್ಪಾರೆಡ್ಡಿಹಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಗ್ರಾಮ ಪಂಚಾಯಿತಿ ಆಡಳಿತ ನೀಡಿದ ಪ್ರಯೋಗಾಲಯವನ್ನು ಉದ್ಘಾಟಿಸಿ ಮಾತನಾಡಿದರು. ಎಸ್‌ಎಸ್‌ಎಲ್‌ಸಿ ಪರೀಕ್ಷೆ ಆರಂಭಕ್ಕೆ ಕೆಲವೇದಿನಗಳಿದ್ದು ಪ್ರಯೋಗಾಲಯದ ಸಹಕಾರದಿಂದ ವಿದ್ಯಾರ್ಥಿಗಳಿಗೆ ಹೆಚ್ಚು ಉಪಯುಕ್ತವಾಗುತ್ತದೆ. ವಿಶೇಷವೆಂದರೆ ಗ್ರಾಮದ ಈ ಸರ್ಕಾರಿ ಪ್ರೌಢಶಾಲೆಯಲ್ಲಿ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ವಿಜ್ಞಾನ ವಿಷಯದಲ್ಲಿ ಪ್ರಶಸ್ತಿ ಪಡೆದ ಮುಖ್ಯ ಶಿಕ್ಷಕ ಶ್ರೀನಿವಾಸ್‌ಮೂರ್ತಿ ಕಾರ್ಯನಿರ್ವಹಿಸುತ್ತಿದ್ದಾರೆ. ವಿದ್ಯಾರ್ಥಿಗಳು ಸಹ ಶ್ರಮವಹಿಸಿ ಅಭ್ಯಾಸ ಮಾಡಿ, ಶೈಕ್ಷಣಿಕ ಪ್ರಗತಿ ಸಾಧಿಸಲು ಸಂಕಲ್ಪ ಮಾಡಬೇಕೆಂದರು.



ಪ್ರಾಸ್ತಾವಿಕವಾಗಿ ಮಾತನಾಡಿದ ಮುಖ್ಯ ಶಿಕ್ಷಕ ಶ್ರೀನಿವಾಸ್‌ಮೂರ್ತಿ, ಗ್ರಾಮದ ಪ್ರೌಢಶಾಲೆಗೆ ವಿಜ್ಞಾನ ಮತ್ತು ಗಣಿತ ಪ್ರಯೋಗಾಲಯದ ಅವಶ್ಯಕತೆಯ ಬಗ್ಗೆ ಗ್ರಾಮ ಪಂಚಾಯಿತಿಗೆ ಪತ್ರ ನೀಡಿದ ಕೂಡಲೇ ಹಣವನ್ನು ಮಂಜೂರು ಮಾಡಿ ಪ್ರಯೋಗಾಲಯದ ಕಾರ್ಯಾರಂಭಕ್ಕೆ ಸಹಕರಿಸಿದ್ದಾರೆ. ಗ್ರಾಮ ಪಂಚಾಯಿತಿ ಅಧ್ಯಕ್ಷ ರಾಮಾಂಜನೇಯ, ಉಪಾಧ್ಯಕ್ಷ, ಸದಸ್ಯರು, ಪಿಡಿಒ ರಜನಿಕಾಂತ್‌ರವರನ್ನು ಅಭಿನಂದಿಸುವುದಾಗಿ ತಿಳಿಸಿದರು. ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ತಿಮ್ಮಾರೆಡ್ಡಿ, ರೈತ ಮುಖಂಡ ರಾಮಚಂದ್ರರೆಡ್ಡಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಮ್ಯಾಥಮಿಟಿಕ್ಸ್ ಅಕಾಡೆಮೆ ಸಂಚಾಲಕ ಎಚ್.ಮಂಜುನಾಥ, ಚಿತ್ರದುರ್ಗ ಸೈನ್ಸ್ ಫೌಂಡೇಷನ್ ಸಂಚಾಲಕ ಎಚ್.ಎಸ್.ತಿಪ್ಪೇಸ್ವಾಮಿ, ಲತೀಫ್‌ಸಾಬ್, ವಿಜ್ಞಾನ ಸಂಪನ್ಮೂಲ ವ್ಯಕ್ತಿಗಳಾದ ನಾಗೇಶ್, ರಂಗನಾಥ, ರಶ್ಮಿ, ವಿಜಯ್, ರಾಘವರೆಡ್ಡಿ, ಪ್ರೌಢಶಾಲಾ ಸಹ ಶಿಕ್ಷಕರ ತಾಲ್ಲೂಕು ಅಧ್ಯಕ್ಷ ಬಿ.ರಾಜಕುಮಾರ್, ಶಿಕ್ಷಕರಾದ ಶಿವಣ್ಣ, ತೇಜಸ್ವಿನಿ, ಇಫ್ರಾನ್, ಅತಿಥಿ ಶಿಕ್ಷಕರಾದ ಧನಂಜಯ, ಆಶಾ, ರಾಘವ, ಹೂಸ್ನ ಮುಂತಾದವರು ಭಾಗವಹಿಸಿದ್ದರು.

---

# ಹೊಸದುರ್ಗ: ಬಿಸಿಲಿನ ಧಗೆಗೆ ಜನತೆಯ ತತ್ತರ



» ನಾಗತಿಹಳ್ಳಿಮಂಜುನಾಥ್

ಹೊಸದುರ್ಗ:ಸತತವಾಗಿ ಎರಡು ವರ್ಷಗಳಿಂದಲೂ ಸಹಾ ತಾಲ್ಲೂಕಿಗೆ ಹದ ಮಳೆ ಬಾರದೆ ಬರಗಾಲಕ್ಕೆ ತುತ್ತಾಗಿರುವ ಈ ತಾಲ್ಲೂಕಿನ ಜನ ಜಾನುವಾರುಗಳು ಅತಿಯಾದ ಬಿಸಿಲಿನ ತಾಪಮಾನದಿಂದ ತತ್ತರಿಸಿ ಹೋಗಿದ್ದಾರೆ.ಹವಮಾನ ಇಲಾಖೆ ಈಗಾಗಲೆ ವರದಿ ಮಾಡಿರುವಂತೆ ತಾಲ್ಲೂಕಿನಲ್ಲಿ ಕಳೆದ ನಾಲ್ಕು ದಿನಗಳ ಹಿಂದೆ 38 ಡಿಗ್ರಿ ಬಿಸಿಲು ಇತ್ತು. 2019–2020 ಹಾಗೂ 2021 ರ ನವಂಬರ್ ನವರೆಗೂ ಸಹಾ ಮಳೆ ಇತ್ತು ಅದರೆ 2022–2023 ಈ ವರ್ಷಗಳಲ್ಲಿ ತಾಲೂಕಿಗೆ ಒಂದು ಹನಿ ಮಳೆಯೂ ಸಹಾ ಬಂದಿಲ್ಲ ಇದರ ನಡುವೆ ಜನ ಜಾನುವಾರ ರೈತರ ಗೋಳಾಟ ಹೇಳತೀರದಾಗಿದೆ.ಅಡಿಕೆ ಮತ್ತಿತರೆ ಬೆಳೆಗಳನ್ನ ಹಾಕಿದ ರೈತರು ಮಳೆ ಇಲ್ಲದ್ದು ಒಂದು ಕಡೆ ಜೋತೆಗೆ ಇದಕ್ಕೆ ಪುಷ್ಟಿ ನೀಡುವಂತೆ ಭಯಾನಕ ಬಿಸಿಲು ಇವುಗಳಿಂದ ಈ ರೈತ ತತ್ತರಿಸಿ ಹೋಗಿದ್ದಾನೆ.ವಿಚಿತ್ರ ರೀತಿಯಲ್ಲಿ ಏರುತ್ತಿರುವ ಬಿಸಿಲಿನ ಧಗೆಗೆ ಜನ ಜಾನುವಾರು ತಲ್ಲಣಿಸಿ ಹೋಗಿವೆ,ಬೆಳಿಗ್ಗೆ 9 ಗಂಟೆಯಿಂದ ಸಂಜೆ ಆರು ಗಂಟೆಯವರೆಗೂ ಸಹಾ ಜನರು ಮನೆಯಿಂದ ಹೊರಗೆ ಹೋರಡಲು ಸಾದ್ಯವಾಗುತ್ತಿಲ್ಲ, ಬಿಸಿಲು ಎಂಬುದು ಅಷ್ಟೊಂದು ಕ್ರೂರವಾಗಿದೆ, ವೃದ್ದರು,ಮಕ್ಕಳು ಬಿಸಿಲಿನ ತಾಪಕ್ಕೆ ಚಡಪಡಿಸುತ್ತಿದ್ದಾರೆ.

---

## ಪ್ರಮುಖ ಸುದ್ದಿ

### ಟಿಹೆಚ್‌ಇಒ ಎನ್.ಎಸ್.ಮಂಜುನಾಥ್ – ಮಕ್ಕಳ ಆರೋಗ್ಯ ತಪಾಸಣೆ

# ಮಕ್ಕಳ ಆರೈಕೆಗಾಗಿ ಆರ್‌ಬಿಎಸ್‌ಕೆ ಸದುಪಯೋಗ ಪಡೆದುಕೊಳ್ಳಿ

» ಚಿತ್ರದುರ್ಗ

ಸಮುದಾಯದ ಎಲ್ಲಾ ಮಕ್ಕಳಿಗೆ ಸಮಗ್ರ ಆರೈಕೆಗಾಗಿರಾಷ್ಟ್ರೀಯಬಾಲಸ್ವಾಸ್ಥ್ಯಕಾರ್ಯಕ್ರಮದ ಚಟುವಟಿಕೆಗಳನ್ನು ಸದುಪಯೋಗ ಪಡಿಸಿಕೊಳ್ಳಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ ಹೇಳಿದರು.

ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದಡಿ ಚಿತ್ರದುರ್ಗ ಭರಮಸಾಗರ, ಬೇವಿನಹಳ್ಳಿ, ನಂದಿಹಳ್ಳಿ ಗ್ರಾಮಗಳ ಒಟ್ಟು 5 ಅಂಗನವಾಡಿ ಕೇಂದ್ರಗಳ ಒಟ್ಟು 151 ಮಕ್ಕಳ ಆರೋಗ್ಯ ತಪಾಸಣೆ 2 ವೈದ್ಯಾಧಿಕಾರಿಗಳ ತಂಡದಿಂದ ನಡೆಸಲಾಯಿತು. ಬೇವಿನಹಳ್ಳಿ ಅಂಗನವಾಡಿ ಕೇಂದ್ರದಲ್ಲಿ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ ತಾಯಂದಿರ ಸಭೆಯಲ್ಲಿ ಮಾತನಾಡಿ, ರಾಷ್ಟ್ರೀಯ ಆರೋಗ್ಯ ಮಿಷನ್ ಅಡಿಯಲ್ಲಿ ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ರಾಷ್ಟ್ರೀಯ ಬಾಲ್ ಸ್ವಾಸ್ಥ್ಯ ಕಾರ್ಯಕ್ರಮವನ್ನು ಪ್ರಾರಂಭಿಸಿತು, ಇದು ನವೀನ ಮತ್ತು ಮಹತ್ವಾಕಾಂಕ್ಷೆಯ ಉಪಕ್ರಮವಾಗಿದೆ. ಇದು ಮಕ್ಕಳ ಆರೋಗ್ಯ ತಪಾಸಣೆ ಮತ್ತು ಆರಂಭಿಕ



ಮಧ್ಯಸ್ಥಿಕೆ ಸೇವೆಗಳನ್ನು ಮೊದಲೇ ಗುರುತಿಸುವ ವ್ಯವಸ್ಥಿತ ವಿಧಾನವಾಗಿದೆ ಎಂದರು. ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮವು ಎಲ್ಲಾ ಮಕ್ಕಳು ತಮ್ಮ ಸಂಪೂರ್ಣ ಸಾಮರ್ಥ್ಯವನ್ನು ಸಾಧಿಸಲು ಸಾಧ್ಯವಾಗುವಂತೆ ಮಕ್ಕಳ ಒಟ್ಟಾರೆ ಜೀವನದ ಗುಣಮಟ್ಟವನ್ನು ಸುಧಾರಿಸುವ ಒಂದು ರೀತಿಯ ಕಾರ್ಯಕ್ರಮವಾಗಿದೆ ಮತ್ತು ಸಮುದಾಯದ ಎಲ್ಲಾ ಮಕ್ಕಳಿಗೆ ಸಮಗ್ರ ಆರೈಕೆಯನ್ನು ಒದಗಿಸುವುದು. ಈ ಕಾರ್ಯಕ್ರಮವು ಹುಟ್ಟಿನಿಂದ 18 ವರ್ಷ ವಯಸ್ಸಿನ ಮಕ್ಕಳನ್ನು 4 ಡಿಎಸ್‌ಗಳಿಗಾಗಿ ಒಳಗೊಂಡಿರುತ್ತದೆ. ಹುಟ್ಟಿನಲ್ಲಿ ದೋಷಗಳು, ರೋಗಗಳು, ನ್ಯೂನತೆಗಳು ಮತ್ತು ಬೆಳವಣಿಗೆಯ ವಿಳಂಬಗಳು, 32 ಸಾಮಾನ್ಯ ಆರೋಗ್ಯ ಪರಿಸ್ಥಿತಿಗಳನ್ನು ಆರಂಭಿಕ ಪತ್ತೆ ಮತ್ತು ಉಚಿತ ಚಿಕಿತ್ಸೆ ಮತ್ತು ನಿರ್ವಹಣೆಗಾಗಿ, ತೃತೀಯ ಹಂತದಲ್ಲಿ ಶಸ್ತ್ರಚಿಕಿತ್ಸೆಗಳು ಸೇರಿದಂತೆ ಗುರುತಿಸಲಾದ ಆಯ್ದ ಆರೋಗ್ಯ ಪರಿಸ್ಥಿತಿಗಳೊಂದಿಗೆ ರೋಗನಿರ್ಣಯ ಮಾಡಿದ ಮಕ್ಕಳಿಗೆ ಜಿಲ್ಲಾ ಮಟ್ಟದಲ್ಲಿ ಆರಂಭಿಕ ಹಸ್ತಕ್ಷೇಪ ಸೇವೆಗಳು ಮತ್ತು ಅನುಸರಣಾ ಆರೈಕೆಯನ್ನು ಒದಗಿಸಲಾಗುತ್ತದೆ. ಈ ಸೇವೆಗಳನ್ನು ಉಚಿತವಾಗಿ ಒದಗಿಸಲಾಗುತ್ತದೆ ಎಂದರು.ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದಡಿ ಚಿತ್ರದುರ್ಗದಲ್ಲಿ ಎ ಮತ್ತು ಬಿ ತಂಡಗಳು ಇದ್ದು, ಪ್ರತಿ ತಂಡದಲ್ಲಿ ಇಬ್ಬರು, ಒಬ್ಬರು ಶುಶ್ರೂಷಾಧಿಕಾರಿ, ಒಬ್ಬರು ನೇತ್ರಾಧಿಕಾರಿ ಇರುತ್ತಾರೆ. ಚಿತ್ರದುರ್ಗ ತಾಲೂಕಿನ 530 ಅಂಗನವಾಡಿ ಕೇಂದ್ರಗಳು ಇದ್ದು, ಇದರಲ್ಲಿ 25933 ಮಕ್ಕಳನ್ನು ವರ್ಷದಲ್ಲಿ ಎರಡು ಬಾರಿ ಆರೋಗ್ಯ ತಪಾಸಣೆ ಮಾಡಲಾಗುವುದು. 434 ಶಾಲೆಗಳಲ್ಲಿ 45278 ಮಕ್ಕಳ ಆರೋಗ್ಯ ತಪಾಸಣೆ ವರ್ಷದಲ್ಲಿ ಒಮ್ಮೆಯಾಗುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಬೇವಿನಹಳ್ಳಿ ಅಂಗನವಾಡಿ ಕೇಂದ್ರದಲ್ಲಿ ದೈನಂದಿನ ಮಕ್ಕಳ ಲಸಿಕಾ ಕಾರ್ಯಕ್ರಮವೂ ಜರುಗಿತು. ಡಾ.ಮಹೇಂದ್ರಕುಮಾರ್, ಡಾ.ಸುಪ್ರಿತಾ, ಶುಶ್ರೂಷಕಿ ಪೂಜಾ, ಸಮುದಾಯ ಆರೋಗ್ಯಾಧಿಕಾರಿ ಬಿ.ಕೆ.ಸುಧಾ, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ಮಲ್ಲಮ್ಮ, ಆಶಾ ಕಾರ್ಯಕರ್ತೆಯರಾದ ರಾಜೇಶ್ವರಿ, ಜ್ಯೋತಿಬಾಯಿ, ಅಂಗನವಾಡಿ ಕಾರ್ಯಕರ್ತೆಯರಾದ ನೇತ್ರಾವತಿ ಶಿವಮ್ಮ, ಭರಮಸಾಗರ ಅಂಗನವಾಡಿ ಕೇಂದ್ರದಲ್ಲಿ 1 ಮಗುವಿಗೆ ಹೃದಯದ ತೊಂದರೆ, 1 ಮಗುವಿಗೆ ವಕ್ರಪಾದದ ತೊಂದರೆ ಕಂಡು ಬಂದಿದ್ದು. ಮಕ್ಕಳನ್ನು ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದಡಿ ಉಚಿತ ಚಿಕಿತ್ಸೆಗಾಗಿ ನಿರ್ದೇಶನ ಮಾಡಲಾಯಿತು.

## ಫಾಸ್ಟ್ ನ್ಯೂಸ್

### ರಸಪ್ರಶ್ನೆ ಸ್ಪರ್ಧೆಯಲ್ಲಿ ವಿಭಾಗ ಮಟ್ಟಕ್ಕೆ ಆಯ್ಕೆ



» **ಹೊಸದುರ್ಗ**

ರಾಷ್ಟ್ರೀಯ ಆವಿಷ್ಕಾರ್ ಅಭಿಯಾನ' ಕಾರ್ಯಕ್ರಮದಡಿ ಡಯಟ್‌ನಲ್ಲಿ ಬುಧವಾರ ನಡೆದ ಜಿಲ್ಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆಯಲ್ಲಿ ಸೀನಿಯರ್ ವಿಭಾಗದಿಂದ ಹೊಸದುರ್ಗ ಪಟ್ಟಣದ ಸರ್ಕಾರಿ ಪ.ಪೂ ಕಾಲೇಜು (ಪ್ರೌಢಶಾಲೆ ವಿಭಾಗ) ವಿದ್ಯಾರ್ಥಿ ಎಂ.ಸಾಗರ್ ಪ್ರಥಮ ಸ್ಥಾನ ಪಡೆದು ವಿಭಾಗ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಈ ವಿದ್ಯಾರ್ಥಿಗೆ ಪ್ರಾಚಾರ್ಯ ಎಂ.ನಾಸಿರುದ್ದೀನ್ ಟ್ರೋಫಿ, ಪದಕ ಮತ್ತು ಪ್ರಮಾಣ ಪತ್ರ ವಿತರಿಸಿದರು. ನೋಡಲ್ ಅಧಿಕಾರಿ ಎಸ್.ಬಸವರಾಜು, ಕ್ವಿಜ್ ಮಾಸ್ಟರ್ ಕೆ.ಆರ್.ಲೋಕೇಶ್, ಹಿರಿಯ ಉಪನ್ಯಾಸಕ ತಿಪ್ಪೇಸ್ವಾಮಿ, ಉಪನ್ಯಾಸಕರಾದ ಆರ್.ನಾಗರಾಜು, ಎನ್.ಮಂಜುನಾಥ್, ತಾಂತ್ರಿಕ ಸಹಾಯಕ ಆರ್.ಲಿಂಗರಾಜು, ಶಿಕ್ಷಕ ವೀರೇಶ್ ಮತ್ತಿತರರಿದ್ದರು.

### ಲೋಕಾಯುಕ್ತ ಪೊಲೀಸ್ ಅಧೀಕ್ಷಕರಿಂದ ಅಹವಾಲು ಸ್ವೀಕಾರ

» **ದಾವಣಗೆರೆ**

ದಾವಣಗೆರೆ ಲೋಕಾಯುಕ್ತ ವಿಭಾಗದ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ದಾವಣಗೆರೆ ನಗರದ ಪ್ರವಾಸಿ ಮಂದಿರದಲ್ಲಿ ಮಾ.13 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30 ವರೆಗೆ ಸಾರ್ವಜನಿಕರ ಅಹವಾಲು ಸ್ವೀಕಾರಿಸುವರು. ಸಾರ್ವಜನಿಕರು ಸರ್ಕಾರದ ವಿವಿಧ ಇಲಾಖೆಗಳಿಗೆ ಸಲ್ಲಿಸಿದ ಅರ್ಜಿಗಳನ್ನು ಇತ್ಯರ್ಥ ಮಾಡದೇ ಬಗ್ಗೆ ಬಾಕಿ ಇಟ್ಟಿರುವ ಬಗ್ಗೆ ತಮ್ಮ ದೂರು ಸಲ್ಲಿಸಬಹುದು. ನ್ಯಾಯಾಲಯದಲ್ಲಿ ವಿಚಾರಣೆ ಬಾಕಿ ಇದ್ದರೆ, ಅಂತಹ ದೂರುಗಳನ್ನು ಸ್ವೀಕರಿಸಲಾಗುವುದಿಲ್ಲ.

### ಮಾರ್ಚ್ 12 ರಂದು ದಾವಣಗೆರೆ ವಿವಿ 11ನೇ ಘಟಿಕೋತ್ಸವ

» **ದಾವಣಗೆರೆ**

ದಾವಣಗೆರೆ ವಿಶ್ವವಿದ್ಯಾನಿಲಯದ 11ನೇ ಘಟಿಕೋತ್ಸವವು ಮಾರ್ಚ್ 12 ರಂದು ಬೆಳಿಗ್ಗೆ 11 ಗಂಟೆಗೆ ತೋಳಹುಣಸೆಯಲ್ಲಿನ ಜ್ಞಾನಸೌಧ ಶಿವಗಂಗೋತ್ರಿ ಆವರಣದಲ್ಲಿ ನಡೆಯಲಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಜ್ಯಪಾಲರು ಹಾಗೂ ದಾವಣಗೆರೆ ವಿಶ್ವವಿದ್ಯಾನಿಲಯದ ಕುಲಾಧಿಪತಿಗಳಾದ ಥಾವರ್‌ಚಂದ್ ಗೆಹ್ಲೋಟ್ ಅವರುವಹಿಸುವರು.ಉನ್ನತಶಿಕ್ಷಣಸಚಿವರುಹಾಗೂ ವಿಶ್ವವಿದ್ಯಾನಿಲಯದ ಸಮಕುಲಾಧಿಪತಿಗಳಾದ ಡಾ.ಎಂ.ಸಿ.ಸುಧಾಕರ್ ಉಪಸ್ಥಿತರಿರುವರು. ಇಸ್ರೋ ಮಾಜಿ ಅಧ್ಯಕ್ಷರಾದ ಎ.ಎಸ್ ಕಿರಣ್ ಕುಮಾರ್ ಮುಖ್ಯ ಅತಿಥಿಗಳಾಗಿ ಘಟಿಕೋತ್ಸವ ಭಾಷಣ ಮಾಡಲಿದ್ದಾರೆ. ಕಾರ್ಯಕ್ರಮದಲ್ಲಿ ದಾವಣಗೆರೆ ವಿ.ವಿ. ಕುಲಪತಿಗಳಾದ ಪ್ರೊ.ಬಿ.ಡಿ.ಕುಂಬಾರ, ಕುಲಸಚಿವರಾದ ಪ್ರೊ. ರಮೇಶ.ಸಿ.ಕೆ, ಕುಲಸಚಿವರು(ಪ್ರಭಾರ) ಪ್ರೊ. ವೆಂಕಟರಾವ್.ಎಂ.ಪಲಾಟೆ ಭಾಗವಹಿಸುವರು.

### ಮಾರ್ಚ್ ಮಾಹೆಯ ಪಡಿತರ ಧಾನ್ಯ ಹಂಚಿಕೆ

» **ದಾವಣಗೆರೆ**

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯಲ್ಲಿನ ಪಡಿತರ ಚೀಟಿದಾರರಿಗೆ ಮಾರ್ಚ್ ಮಾಹೆಗೆ ಅನ್ವಯವಾಗುವಂತೆ ಪಡಿತರ ಧಾನ್ಯ ಹಂಚಿಕೆ ಮಾಡಲಾಗಿದೆ. ಅಂತ್ಯೋದಯ ಪಡಿತರ ಚೀಟಿದಾರರಿಗೆ ಪ್ರತಿ ಕಾರ್ಡ್‌ಗೆ 35 ಕೆ.ಜಿ ಅಕ್ಕಿ, ಆದ್ಯತಾ ಹಾಗೂ ಬಿ.ಪಿ.ಎಲ್ ಪಡಿತರ ಚೀಟಿದಾರರಿಗೆ 5 ಕೆ.ಜಿ ಅಕ್ಕಿ ಉಚಿತವಾಗಿ ವಿತರಿಸಲಾಗುತ್ತದೆ. ಹಾಗೂ ಪ್ರತಿ ಕೆ.ಜಿ ಗೆ ರೂ.15ರಂತೆ ಒಪ್ಪಿಗೆ ನೀಡಿದ ಎ.ಪಿ.ಎಲ್ ಏಕ ಸದಸ್ಯ ಪಡಿತರ ಚೀಟಿದಾರರಿಗೆ 5 ಕೆ.ಜಿ, ಎರಡು ಮತ್ತು ಹೆಚ್ಚಿನ ಸದಸ್ಯರನ್ನು ಹೊಂದಿರುವವರಿಗೆ 10 ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು.ಸರ್ಕಾರದ ಗ್ಯಾರಂಟಿ ಯೋಜನೆಯಡಿ 5 ಕೆ.ಜಿ ಅಕ್ಕಿ ಬದಲಾಗಿ ಪಡಿತರ ಚೀಟಿದಾರರಿಗೆ ನೇರ ನಗದು ವರ್ಗಾವಣೆ ಮಾಡುತ್ತಿದ್ದು, ಯಾವುದೇ ರೀತಿಯ ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ಹತ್ತಿರದ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ ಪರಿಹರಿಸಿಕೊಳ್ಳಬಹುದೆಂದು ಆಹಾರ ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕ ಸಿದ್ದರಾಮ್ ಮಾರಿಹಾಳ್ ತಿಳಿಸಿದ್ದಾರೆ.

### ಲೋಕಾದಾಲತ್ ಮಾ.16 ಕ್ಕೆ ಮುಂದೂಡಿಕೆ

» **ದಾವಣಗೆರೆ**

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಮಾರ್ಚ್ 9 ರಂದು ಆಯೋಜಿಸಲಾಗಿದ್ದ ರಾಷ್ಟ್ರೀಯ ಲೋಕ್ ಅದಾಲತ್‌ನ್ನು ಮಾ.16 ಕ್ಕೆ ಮುಂದೂಡಲಾಗಿದೆ

**ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆ, ಸುಧಾರಣೆಗೆ ಮೂರು ತಿಂಗಳ ಗಡುವು – ಜಿಲ್ಲಾಧಿಕಾರಿ ಟಿ.ವೆಂಕಟೇಶ್**

# ರಸ್ತೆ ಅಪಘಾತ: ಅಧಿಕಾರಿ ಮೇಲೆ ಎಫ್‌ಐಆರ್

» **ಚಿತ್ರದುರ್ಗ**

ಅವೈಜ್ಞಾನಿಕ ರಸ್ತೆ ನಿರ್ಮಾಣ ಹಾಗೂ ಬೇಜವಾಬ್ದಾರಿ ರಸ್ತೆ ನಿರ್ವಹಣೆಯಿಂದ ಅಪಘಾತಗಳು ಉಂಟಾಗಿ, ಸಾವು ನೋವು ಸಂಭವಿಸಿದರೆ, ರಸ್ತೆ ನಿರ್ವಹಣೆಯ ಹೊಣೆ ಹೊತ್ತ ಸಂಬಂಧಪಟ್ಟ ಅಧಿಕಾರಿಯ ಮೇಲೆ ಎಫ್.ಐ.ಆರ್ ದಾಖಲಿಸಲಾಗುವುದು. ನಿರ್ಲಕ್ಷ್ಯತನ ಕಂಡು ಬಂದರೆ, ಪ್ರಕರಣ ದಾಖಲಿಸಿ ಕಠಿಣ ಶಿಕ್ಷೆಗೆ ಗುರಿಪಡಿಸುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ ನೀಡಿದರು.

ಗುರುವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ರಸ್ತೆ ಸುರಕ್ಷಿತ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಸ್ತೆ ಸುರಕ್ಷತಾ ಸಮಿತಿ ನೀಡಿದ ಸೂಚನೆಗಳನ್ನು ಅಧಿಕಾರಿಗಳು ತಪ್ಪದೆ ಪಾಲಿಸಬೇಕು. ಜಿಲ್ಲೆಯಲ್ಲಿ ಉಂಟಾಗುತ್ತಿರುವ ಅಪಘಾತಗಳ ಪ್ರಮಾಣ ಇಳಿಕೆಯಾಗಬೇಕು. ರಾಷ್ಟ್ರೀಯ, ರಾಜ್ಯ ಹಾಗೂ ಜಿಲ್ಲಾ ರಸ್ತೆಗಳ ಸುರಕ್ಷತಾ ಲೆಕ್ಕ ಪರಿಶೋಧನೆಯನ್ನು ಮಾಡಿಸಬೇಕು. ನಿರ್ವಹಣೆ ತೊಂದರೆಯಿಂದ ರಸ್ತೆಯಲ್ಲಿ ಅಪಘಾತ ಉಂಟಾದರೆ, ಸಂಬಂಧಿಸಿದ ಲೋಕೋಪಯೋಗಿ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಹಾಗೂ ನಗರ ಸ್ಥಳೀಯ ಸಂಸ್ಥೆಗಳು ಸೇರಿದಂತೆ ರಸ್ತೆ ನಿರ್ಮಾಣ ಹಾಗೂ ನಿರ್ವಹಣೆ ಹೊಣೆ ಹೊತ್ತ ಇಲಾಖೆ ಹಾಗೂ ಅಧಿಕಾರಿಗಳ ಮೇಲೆ ಪ್ರಕರಣ ದಾಖಲಿಸುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಪುನರುಚ್ಚಿಸಿದರು.

ಮುಂದಿನ ಮೂರು ತಿಂಗಳ ನಂತರ ಸಭೆ ಸೇರುವ ವೇಳೆಗೆ ಪರಿಸ್ಥಿತಿ ಸುಧಾರಣೆ ಆಗಿರಬೇಕು.ನಗರ ಸ್ಥಳೀಯ ಸಂಸ್ಥೆಗಳಲ್ಲಿ ಬೀದಿ ಬದಿ ವ್ಯಾಪಾರಿಗಳು ವ್ಯಾಪಾರ ನಡೆಸಲು ವಲಯಗಳನ್ನು ಗುರುತಿಸಬೇಕು. ಪಾರ್ಕಿಂಗ್,ಆಟೋ ಹಾಗೂ ಜಾಹೀರಾತು ಪ್ರದರ್ಶನ ಸ್ಥಳಗಳನ್ನು ಗುರುತಿಸಿ ಅಧಿಸೂಚಿಸಬೇಕು. ಎಲ್ಲಾ ಇಲಾಖೆಗಳಲ್ಲಿ ರಸ್ತೆ ನಿರ್ಮಾಣದ ಕಾಮಗಾರಿಗೆ ಟೆಂಡರ್



ನೀಡುವ ವೇಳೆ, ರಸ್ತೆ ಸುರಕ್ಷತೆಯನ್ನು ಧ್ಯಾನದಲ್ಲಿರಿಸಿ ನಿಯಮಗಳನ್ನು ವಿಧಿಸಬೇಕು. ವಸ್ತುಗಳ ಸಾಗಾಣೆ ಮಾಡುವ ವಾಹನಗಳಲ್ಲಿ ಸಾರ್ವಜನಿಕರ ಓಡಾಟಕ್ಕೆ ಅವಕಾಶ ನೀಡಬಾರದು. ಸಾರಿಗೆ ಇಲಾಖೆ ಅಧಿಕಾರಿಗಳು ಇದರ ಬಗ್ಗೆ ನಿಗಾವಹಿಸಬೇಕು. ರಸ್ತೆ ಹಾಗೂ ವಾಹನ ಸಾಮರ್ಥ್ಯಕ್ಕಿಂತ ಅಧಿಕ ಭಾರ ಹೊತ್ತು ಸಾಗುವ ಅಧಿರು ಸಾಗಟ ಲಾರಿಗಳ ವಿರುದ್ಧ ಕಠಿಣ ಕ್ರಮಕ್ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ ಸೂಚನೆ ನೀಡಿದರು.

ರಸ್ತೆ ಸುರಕ್ಷತಾ ನಿಧಿಯಡಿಯಲ್ಲಿ ಅನುದಾನ ಒದಗಿಸುವಂತೆ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಿ. ರಸ್ತೆ ಸುರಕ್ಷತಾ ನಿಧಿಯಿಂದ ಜಿಲ್ಲೆಯಲ್ಲಿ ಈಗಾಗಲೇ ಗುರುತಿಸಲಾಗಿರುವ ಅಪಘಾತ ವಲಯಗಳಲ್ಲಿ ಸೂಚನಾ ಫಲಕ, ಮಾರ್ಕಿಂಗ್, ಬ್ಲಿಂಕರ್ಸ್ ಅಳವಡಿಕೆ ಸೇರಿದಂತೆ ಅಗತ್ಯ ರಸ್ತೆ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು.

ಚಿತ್ರದುರ್ಗ ನಗರದಲ್ಲಿ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ ಸೇವಾ ರಸ್ತೆಗಳಲ್ಲಿ ರಾತ್ರಿ ಸಮಯದಲ್ಲಿ ಕಳ್ಳತನ ಪ್ರಕರಣಗಳು ಆಗುತ್ತಿದ್ದು, ಈ ರಸ್ತೆಗಳಲ್ಲಿ ಬೀದಿ ದೀಪಗಳನ್ನು ಅಳವಡಿಸಬೇಕು. ಬೀದಿಬದಿ ವ್ಯಾಪಾರ ಮಾಡುವುದರಿಂದ ಸಾರ್ವಜನಿಕರ ಸುಗಮ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ನಗರಸಭೆ ಕಡೆಯಿಂದ ಸೂಕ್ತ ಜಾಗವನ್ನು ಕಲ್ಪಿಸಿ, ರಸ್ತೆಯ ಮೇಲೆ ವ್ಯಾಪಾರ ಮಾಡದಂತೆ ನೋಡಿಕೊಂಡರೆ ನಗರದ ಪ್ರದೇಶದಲ್ಲಿ ಸಂಚಾರಿ ದಟ್ಟಣೆ ಕಡಿಮೆ ಮಾಡಿ ಸುಗಮ ಸಂಚಾರಕ್ಕೆ ಅನುವು ಮಾಡಿ ಕೊಡಬಹುದು ಎಂದು ಹೇಳಿದರು.

ಅಪಘಾತದಲ್ಲಿ ವಾರ್ಷಿಕ 500 ಜನರ ಸಾವು...!: ಜಿಲ್ಲೆಯಲ್ಲಿ ಅಪರಾಧ ಪ್ರಕರಣಗಳಲ್ಲಿ ವಾರ್ಷಿಕವಾಗಿ ಸರಾಸರಿ 23 ಜನರು ಹತ್ಯೆರಾದರೆ, ರಸ್ತೆ ಅಪಘಾತದಲ್ಲಿ 500ಕ್ಕೂ ಅಧಿಕ ಅಮಾಯಕ ಜನರು ಸಾವಿಗೀಡಾಗುತ್ತಿದ್ದಾರೆ. ಇದಕ್ಕೆ ಮುಖ್ಯ ಕಾರಣ, ಅವೈಜ್ಞಾನಿಕ ರಸ್ತೆ ನಿರ್ಮಾಣ, ಸಂಚಾರ ಚಿಹ್ನೆಗಳು ಇಲ್ಲದಿರುವುದು. ವಿವಿಧ ಇಲಾಖೆಗಳ ಸಮನ್ವಯತೆ ಕೊರತೆ. ಸಂಬಂದ ಪಟ್ಟ ನಿರ್ವಹಣೆಯ ಹೊಣೆ ಒತ್ತ ಇಲಾಖೆಯ ಅಧಿಕಾರಿಗಳು ಹಾಗೂ ವಾಹನ ಚಾಲಕ ನಿರ್ಲಕ್ಷ ಬೇಜವಬ್ದಾರಿಯಾಗಿದೆ. ಚಿತ್ರದುರ್ಗ ಜಿಲ್ಲೆ ಅಪಘಾತದಲ್ಲಿ ಸಾವು ನೋವು ಉಂಟಾಗುವುದಕ್ಕೆ ಅಪಖ್ಯಾತಿ ಗಳಿಸಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ ಬೇಸರ ವ್ಯಕ್ತ ಪಡಿಸಿದರು.

ಹಿರಿಯೂರು ನಿಂದ ಭರಮಸಾಗರದವರೆಗೆ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿಯಲ್ಲಿ ಹೆಚ್ಚಿನ ಅಪಘಾತ ಸಂಭವಿಸಿ ಜನರು ಸಾವಿಗೆ ಈಡಾಗುತ್ತಿದ್ದಾರೆ. ಇದರೊಂದಿಗೆ ಹಿರಿಯೂರು–ಬಳ್ಳಾರಿ ಹೆದ್ದಾರಿ, ಚಿತ್ರದುರ್ಗ–ಶಿವಮೊಗ್ಗ ಹೆದ್ದಾರಿಗಳು ಸಹ ಅಪಘಾತ ವಲಯಗಳನ್ನು ಹೊಂದಿವೆ. ರಸ್ತೆ ನಿರ್ಮಾಣ ಮಾಡುವುದು ಮಾತ್ರವಲ್ಲದೇ, ರಸ್ತೆ ಸುರಕ್ಷತೆ ಕುರಿತು ಗಮನಹರಿಸುವುದು ಮುಖ್ಯವಾಗಿದೆ. ವಾಹನಗಳ ಮಾಲೀಕರು ರಸ್ತೆ ತೆರಿಗೆ, ಹೆದ್ದಾರಿ ಶುಲ್ಕ ಸೇರಿದಂತೆ ಇತ್ಯಾದಿ ಎಲ್ಲಾ ತೆರಿಗೆ ಪಾವತಿಸುತ್ತಾರೆ. ಹಾಗಾಗಿ ರಸ್ತೆಯಲ್ಲಿ ಸುರಕ್ಷಿತವಾಗಿ ಚಲಿಸಲು ಅನುಕೂಲ ಮಾಡಿಕೊಡಬೇಕು. ರಸ್ತೆ ನಿರ್ಮಾಣ ಹಾಗೂ ನಿರ್ವಹಣೆಯನ್ನು ಸಂಬಂಧಪಟ್ಟ ಇಲಾಖೆಯವರು ಯಾವುದೇ ಇಂಜಿನಿಯರಿಂಗ್ ತೊಂದರೆಗಳು ಬಾರದಂತೆ ನಿರ್ಮಿಸಬೇಕು.

ಸದ್ಯ ಚಿತ್ರದುರ್ಗ–ಹೊಸಪೇಟೆ ಹೆದ್ದಾರಿಯ ನಿರ್ವಹಣೆ ಹೊತ್ತ ಕಂಪನಿ ಉತ್ತಮ ರೀತಿಯಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಕೆಳ ತಿಂಗಳ ಹಿಂದೆ ಭೀಕರ ಅಪಘಾತ ಸಂಭವಿಸಿದ ಬಳಿಕ, ಈ ಹೆದ್ದಾರಿ ಪಕ್ಕದಲ್ಲಿ ಲಾರಿ ನಿಲುಗಡೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ರಸ್ತೆ ಮಾರ್ಗದಲ್ಲಿ ಪೊಲೀಸ್ ಗಸ್ತನ್ನು ಹೆಚ್ಚಿಸಲಾಗಿದೆ. ಇದರಿಂದ ಅಪಘಾತ ಪ್ರಮಾಣ ಗಣನೀಯವಾಗಿ ಇಳಿಕೆಯಾಗಿದೆ. ಆದರೆ ಚಿತ್ರದುರ್ಗ ನಗರದಲ್ಲಿ ಹಾದು ಹೋಗಿರುವ ಹಳೆಯ ಹೆದ್ದಾರಿ ರಸ್ತೆ ನಿರ್ವಹಣೆ ಇಲ್ಲದೇ ಅಪಘಾತ ಪ್ರಮಾಣ ಹೆಚ್ಚಾಗುತ್ತಿದೆ ಎಂದರು.

ಈಗಾಗಲೇ ರಸ್ತೆಯನ್ನು ಹೆದ್ದಾರಿ ಪ್ರಾಧಿಕಾರ ಲೋಕೋಪಯೋಗಿ ಇಲಾಖೆಗೆ ಹಸ್ತಾಂತರಿಸಿದೆ. ತಕ್ಷಣವೇ ಹೆದ್ದಾರಿ ಮಧ್ಯದ ಡಿವೈಡರ್‌ಗಳಲ್ಲಿ ಬೆಳೆದಿರುವ ಗಿಡಗಳನ್ನು ಕಡಿಯುವ ಕೆಲಸವಾಗಬೇಕು. ಇಲ್ಲವಾದರೆ ಚಾಲಕರಿಗೆ ರಸ್ತೆ ಸಂಚಾರಿ ಫಲಕಗಳು, ಯು ಟರ್ನ್ ಸ್ಥಳಗಳು ಗೊತ್ತಾಗದೆ ಅಪಘಾತ ಸಂಭವಿಸುತ್ತದೆ. ಕಳೆದ ತಿಂಗಳಿನಲ್ಲಿ ದಾವಣಗೆರೆ ರಸ್ತೆಯಲ್ಲಿನ ಭೋವಿ ಮಹಾಸಂಸ್ಥಾನ ಮಠದ ಸಮೀಪದ ಯೂ ಟರ್ನ್ ಬಳಿ ಇನೋವಾ ಕಾರು, ತಿರುವು ಪಡೆಯುತ್ತಿದ್ದ ಲಾರಿ ಡಿಕ್ಕಿಯಾಗಿ ಇಬ್ಬರು ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ ಎಂದು ತಿಳಿಸಿದರು.

ಹೆಚ್ಚಿನ ಅಪಘಾತಗಳಲ್ಲಿ ಕುಟುಂಬದಲ್ಲಿ ದುಡಿಯುವ ವ್ಯಕ್ತಿವೇ ಮೃತಪಟ್ಟು ಕುಟುಂಬಗಳು ಬೀದಿಪಾಲಾಗುತ್ತಿವೆ. ಇದು ಅತ್ಯಂತ ಖೇದರಕ ಸಂಗತಿಯಾಗಿದೆ. ಇನ್ನೂ ಚಿತ್ರದುರ್ಗ ಜಿಲ್ಲೆಯ ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಹೆದ್ದಾರಿಗಳಲ್ಲಿ ಅಪಘಾತ ಹೆಚ್ಚಾಗುತ್ತಿವೆ. ಹಳೆಯ ಗೂಡ್ಸ್ ವಾಹನ, ಟ್ಯಾಕ್ಟರ್, ಲಾರಿ, ಟಿಪ್ಪರ್‌ಗಳ ಹಿಂಬದಿಯಲ್ಲಿ ರಿಫ್ಲಕ್ಟರ್‌ಗಳು ಇಲ್ಲದೇ ಇರುವುದು ಕಂಡುಬುರುತ್ತದೆ. ಸಾರಿಗೆ ಇಲಾಖೆ ಅಧಿಕಾರಿಗಳು ರಿಫ್ಲಕ್ಟರ್‌ಗಳ ಅಳವಡಿಕೆಗೆ ವಿಶೇಷ ಆಂದೋಲ ನಡೆಸುವಂತೆ ಹೇಳಿದರು.

ಸಭೆಯಲ್ಲಿ ಲೋಕೋಪಯೋಗಿ ಕಾರ್ಯಪಾಲಕ ಅಭಿಯಂತರ ಮಲ್ಲಿಕಾರ್ಜುನ್, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್.ಎಂ.ಕಾಳೆಸಿಂಘೆ, ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ನಗರಸಭೆ ಆಯುಕ್ತೆ ಎಂ.ರೇಣುಕಾ ಸೇರಿದಂತೆ ಹೆದ್ದಾರಿ ಪ್ರಾಧಿಕಾರ ಹಾಗೂ ಇತರೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# 2 ತಿಂಗಳಲ್ಲಿ ಪ್ರತಿಯೊಂದು ಗ್ರಾಮಕ್ಕೂ ಕುಡಿವ ನೀರಿನ ವ್ಯವಸೆ: ರಘುಮೂರ್ತಿ

» **ಮೊದಲ ಪುಟದಿಂದ**

ಭದ್ರಾ ಮೇಲ್ದಂಡೆ ಯೋಜನೆ ಮೂಲಕ ಕ್ಷೇತ್ರದ ಎಲ್ಲಾ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಪ್ರಗತಿಯಲ್ಲಿದೆ. ನಮ್ಮ ಸರ್ಕಾರ ಗ್ಯಾರಂಟಿ ಯೋಜನೆಗಳ ಜತೆಯಲ್ಲಿ ಅಭಿವೃದ್ಧಿಗೂ ಹೆಚ್ಚಿನ ಆದ್ಯತೆ ನೀಡುತ್ತದೆ.

ನಗರದ ವ್ಯಾಪ್ತಿಯಲ್ಲಿ ಯುಜಿಡಿ, ಶಿಕ್ಷಣಕ್ಕೆ ಹೆಚ್ಚಿನ ಒತ್ತು, ಲಿಡ್ಕರ್ ವತಿಯಿಂದ 175ಮನೆ, 1008 ಜಿ+2ಮನೆಗಳ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ. ಗ್ರಾಮದ ರಸ್ತೆ ಇನ್ನೂ ಕೆಲವೇ ದಿನಗಳಲ್ಲಿ ಕೂಡು ರಸ್ತೆ ಯೋಜನೆ ಜಾರಿಯಾಗಲಿದೆ. ಪ್ರತಿಯೊಬ್ಬರಿಗೂ ಸೂರು ಕಲ್ಪಿಸುವ ಯೋಜನೆ ನಮ್ಮ ಸರ್ಕಾರದ್ದು. ಮುಂದೆ ಬರುವ ಎಲ್ಲಾ ಚುನಾವಣೆಗಳಲ್ಲೂ ನಮ್ಮ ಪಕ್ಷಕ್ಕೆ ಬಹುಮತ ನೀಡಿ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ, 94–ಸಿ ಯೋಜನೆಯಡಿ ನಗರಪ್ರದೇಶದಲ್ಲಿ 109, ಕಸಬಾ–186, ಪರಶುರಾಮಪುರ–181 ಒಟ್ಟು 376 ಫಲಾನುಭವಿಗಳಿಗೆ ಇಂದು ಶಾಸಕರ ಮೂಲಕ ಮನೆ ಹಂಚಿಕಾತಿಪತ್ರ ನೀಡಲಾಗುತ್ತಿದೆ. ಇನ್ನೂ 100ಕ್ಕೂ ಹೆಚ್ಚು ಜನರಿಗೆ ನೀಡಲು ಸಿದ್ದತೆ ನಡೆದಿದೆ. ಸರ್ಕಾರ ನಿಗದಿಪಡಿಸಿದ ಶುಲ್ಕವನ್ನು



ಫಲಾನುಭವಿಗಳು ಪಾವತಿಸಬೇಕು, ಪರಿಶಿಷ್ಟ ಜಾತಿ, ವರ್ಗ 2500, ಸಾಮಾನ್ಯ ವರ್ಗ 5000ರೂನ್ನು ಶುಲ್ಕದ ರೀತಿಯಲ್ಲಿ ಸರ್ಕಾರಕ್ಕೆ ಪಾವತಿಸಬೇಕು ಎಂದರು.

ಕಾರ್ಯಕ್ರಮಉದ್ದೇಶಿಸಿ ನಗರಸಭಾ ಸದಸ್ಯರಾದ ಎಂ.ಜೆ.ರಾಘವೇಂದ್ರ, ಕೆ.ವೀರಭದ್ರಪ್ಪ ಮಾತನಾಡಿದರು. ವೇದಿಕೆಯಲ್ಲಿ ನಗರಸಭಾ ಸದಸ್ಯರಾದ ಬಿ.ಟಿ.ರಮೇ□□ಗೌಡ, ಜೈತುಂಬಿ, ಸುಜಾತ, ಸುಮಾ, ಪ್ರಭಾರ ಪೌರಾಯುಕ್ತ ಕೆ.ವಿನಯ್, ವ್ಯವಸ್ಥಾಪಕ ಲಿಂಗರಾಜು, ಕೊಳಗೆರಿ ಇಂಜಿನಿಯರ್ ರಾಮಾಂಜನೇಯರೆಡ್ಡಿ, ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಟಿ.ಪ್ರಭುದೇವ್, ಕೃಷ್ಣ, ಸಿರಿಗೊಂಡಪ್ಪ, ಸಿ.ಟಿ.ಶ್ರೀನಿವಾಸ್, ಕಂದಾಯಾಧಿಕಾರಿ ಲಿಂಗೇಗೌಡ, ರಾಜೇಶ್, ಗ್ರಾಮ ಲೆಕ್ಕಿಗ ಪ್ರಕಾಶ್, ಡಿ.ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

### ಸಿರಿ ಧಾನ್ಯಗಳ ಉತ್ಪಾದನೆ ಮತ್ತು ಮೌಲ್ಯವರ್ಧಿತ ಉತ್ಪನ್ನಗಳ ತರಬೇತಿ



» **ಹೊಸದುರ್ಗ**

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮತ್ತು ಕೃಷಿ ವಿಜ್ಞಾನ ಕೇಂದ್ರ ಹಿರಿಯೂರು ಇವರ ಸಂಯುಕ್ತ ಆಶ್ರಯದಲ್ಲಿ ಪಟ್ಟಣದ ಶ್ರೀ ಕ್ಷೇತ್ರ ಧರ್ಮಸ್ಥಳ ಕಛೇರಿಯಲ್ಲಿ ನಡೆಯಿತು. ಈ ಕಾರ್ಯಕ್ರಮದಲ್ಲಿ ಹಿರಿಯೂರು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ. ಕುಮಾರ್ ಮಾತನಾಡಿ ಹೊಸದುರ್ಗ ತಾಲ್ಲೂಕಿನಲ್ಲಿ ಸಿರಿದಾನ್ಯಗಳ ಹೆಚ್ಚು ಬೆಳೆಯುವುದರಿಂದ ಸಿರಿಧಾನ್ಯಗಳ ನಾಡು ಎಂದು ಕರೆಯಲಾಗಿದೆ. ಈ ಪ್ರದೇಶಗಳಲ್ಲಿ ಅತಿ ಹೆಚ್ಚು ಬೆಳೆಯುತ್ತಿದ್ದಾರೆ. ಈ ಬೆಳೆಗಳ ಆಹಾರ ಉತ್ಪನ್ನಗಳನ್ನು ಬಳಸಬೇಕು ಮತ್ತು ಸಿರಿಧಾನ್ಯಗಳನ್ನು ಮೌಲ್ಯವರ್ಧಿತ ಉತ್ಪನ್ನಗಳನ್ನು ಸ್ವಸಹಾಯ ಸಂಘಗಳಲ್ಲಿ ಉತ್ಪಾದನೆ ಮಾಡಿ ಬಳಕೆ ಮಾಡಲು ಸಹಾಯ ಮಾಡಬೇಕು ಎಂದರು. ಕ್ಷೇತ್ರ ಯೋಜನಾಧಿಕಾರಿ ಶಿವಣ್ಣ.ಎಸ್ ಮಾತನಾಡಿ ಸಿರಿ ಧಾನ್ಯದಿಂದ ಬಳಸುವುದರಿಂದ ಉತ್ತಮವಾದ ಆರೋಗ್ಯ, ಆಯಸ್ಸು ಹೆಚ್ಚಾಗುತ್ತದೆ,ಅದಕ್ಕಾಗಿ ಯುವಪೀಳಿಗೆಗೆ ಸಿರಿಧಾನ್ಯಗಳಿಂದಲೇ ಆಹಾರವನ್ನು ತಯಾರಿಸುವ ರೂಢಿ ಮಾಡಬೇಕು.ಇದಕ್ಕಾಗಿ ಧರ್ಮಸ್ಥಳ ಯೋಜನೆಯಿಂದ ಅಗತ್ಯ ತರಬೇತಿ ಮತ್ತು ಮಾಹಿತಿಯನ್ನು ರಾಜ್ಯದಾದ್ಯಂತ ನೀಡಲಾಗುತ್ತಿದೆ ಎಂದು ತಿಳಿಸಿದರು. ಕೃಷಿ ವಿಜ್ಞಾನ ಕೇಂದ್ರ ಡಾ. ಸರಸ್ವತಿ ಗೃಹ ಇವರು ಮಹಿಳೆಯರ ಜೀವನ ಶೈಲಿ ಮತ್ತು ಸಿರಿ ಧಾನ್ಯಗಳಲ್ಲಿರುವ ಪೌಷ್ಟಿಕತೆಯ ಬಗ್ಗೆ ಮಾಹಿತಿ ನೀಡಿದರು.

## ಪ್ರಮುಖ ಸುದ್ದಿ

**ನಾಯಕನೌಕರರ ಸ್ನೇಹ ಬಳಗದ ವತಿಯಿಂದ ಕುಡಿಯುವ ನೀರಿನ ಅರವಟಿಕೆ ವ್ಯವಸ್ಥೆ**

# ನಾಯಕನೌಕರರ ಕಾರ್ಯಕ್ರಮಕ್ಕೆ ರಘುಮೂರ್ತಿ ಮೆಚ್ಚುಗೆ

» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ನಾಯಕನೌಕರರ ಸ್ನೇಹ ಬಳಗ, ನೌಕರರ ಸಂಘದ ವತಿಯಿಂದ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಬೇಸಿಗೆ ಹಿನ್ನೆಲೆ ಸಾರ್ವಜನಿಕರಿಗೆ ಬಿಸಿಲಿನ ದಾಹ ತೀರಿಸಿಕೊಳ್ಳಲು ಅನುಕೂಲವಾಗುವಂತೆ ತಣ್ಣನೆಕುಡಿಯುವನೀರಿನಅರವಟಿಕೆಯನ್ನು ಆರಂಭಿಸಲಾಗಿದೆ.

ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಅರವಟಿಕೆ ಉದ್ಘಾಟಿಸಿ ಮಾತನಾಡಿ, ನಾಯಕ ನೌಕರರ ಸ್ನೇಹ ಬಳಗ, ನೌಕರರ ಸಂಘ ಕಳೆದ 12 ವರ್ಷಗಳಿಂದ ಸ್ವಯಂಪ್ರೇರಿತವಾಗಿ ಈ ಕಾರ್ಯಕ್ರಮ ನಡೆಸುತ್ತಾ ಬಂದಿದೆ. ಬೇಸಿಗೆಯ ಉರಿಯುವ ಬಿಸಿಲಿನಲ್ಲಿ ಹಲವಾರು ಕೆಲಸ ಕಾರ್ಯಗಳಿಗಾಗಿ ನಗರ, ಗ್ರಾಮೀಣ ಪ್ರದೇಶಗಳಿಂದ ತಾಲ್ಲೂಕು ಕಚೇರಿ ಹಾಗೂ ಇನ್ನಿತರ ಕಚೇರಿಗೆ ಬರುವ ಸಾರ್ವಜನಿಕರು ಬಿಸಿಲಿನ ಝಳಕ್ಕೆ ಬೇಸತ್ತು ನೀರಿಗಾಗಿ ಹೋಟೆಲ್ ಹಾಗೂ ಅಂಗಡಿಗಳನ್ನು ಸಂಪರ್ಕಿಸಬೇಕಿತ್ತು. ಈ ಹಿನ್ನೆಲೆಯಲ್ಲಿ



ಜನರಿಗೆ ಬೇಸಿಗೆಯ ಬಿಸಿಲಿನ ಝಳದಿಂದ ಬೇಸತ್ತ ಜನರಿಗೆ ತಣ್ಣನೆಯ ಕುಡಿಯುವ ನೀರು ಕೊಟ್ಟು ಅವರ ನೀರಿನ ದಾಹವನ್ನು ತಣಿಸುವ ಕೆಲಸವನ್ನು ಮಾಡುತ್ತಿರುವುದು ಶ್ಲಾಘನೀಯ. ಇದು ಪುಣ್ಯಕಾರ್ಯವೆಂದು ನಾನಾದರೂ ಭಾವಿಸುವೆ. ಈ ವ್ಯವಸ್ಥೆ ಹೀಗೆ ಮುಂದುವರೆಯಲಿ. ಮಹರ್ಷಿ ಶ್ರೀವಾಲ್ಮೀಕಿ ಆಶೀರ್ವಾದ ಸದಾ ನಿಮಗೆ ಲಭಿಸಲಿ ಎಂದು ಹಾರೈಸಿದರು.

ನಾಯಕ ನೌಕರರ ಸಂಘದ ಅಧ್ಯಕ್ಷ ಸಿ.ಟಿ.ವೀರೇಶ್, ಚಳ್ಳಕೆರೆ ತಾಲ್ಲೂಕಿನಾದ್ಯಂತ ಕಾರ್ಯನಿರ್ವಹಿಸುತ್ತಿರುವ ನಾಯಕ ನೌಕರರ ಬಂಧುಗಳು ಸ್ನೇಹ ಕೂಟ ರಚಿಸಿಕೊಂಡು ಸಾರ್ವಜನಿಕರಿಗೆ ಬೇಸಿಗೆ ಕಾಲದಲ್ಲಿ ಕುಡಿಯಲು ತಂಪಾದ ನೀರನ್ನು ಒದಗಿಸಲಾಗುತ್ತಿದೆ. ಇದಕ್ಕೆ ನಮ್ಮ ಸಮಾಜದ ಎಲ್ಲಾ ನೌಕರರು ಸ್ವಯಂಪ್ರೇರಿತವಾಗಿ ಸಹಕಾರ ನೀಡಿದ್ದಾರೆ. ಮುಂದಿನ ದಿನಗಳಲ್ಲೂ ಸಹ ಈ ವ್ಯವಸ್ಥೆ ಮುಂದುವರೆಸಿ ಕೊಂಡು ಹೋಗಲಾಗುವುದು ಎಂದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ರೇಹಾನ್‌ಪಾಷ, ಕನ್ನಡ ಸಾಹಿತ್ಯಪರಿಷತ್ ತಾಲ್ಲೂಕು ಅಧ್ಯಕ್ಷ ಜೆ.ಟಿ.ವೀರಭದ್ರಸ್ವಾಮಿ, ನಾಯಕ ನೌಕರರ ಸಂಘದ ಕಾರ್ಯದರ್ಶಿ ಸಿ.ಗುರುಸ್ವಾಮಿ, ಬಿ.ತಿಪ್ಪೇಸ್ವಾಮಿ, ಪಾಲಯ್ಯ, ಮಹಂತೇಶ್, ಬೆಸ್ಕಾಂ ನಾಗರಾಜು, ನಾಯಕನಹಟ್ಟಿ ಪಟ್ಟಣಪಂಚಾಯಿತಿ ಅಧಿಕಾರಿ ಎಸ್.ಪಾಲಯ್ಯ, ರಾಜಣ್ಣ, ಬಿ.ಸುರೇಶ್, ಟಿ.ರಾಜು, ಸಣ್ಣಪಾಪಣ್ಣ, ಪ್ರದೀಪ್, ಬೊಮ್ಮಲಿಂಗಪ್ಪ, ಪ್ರಕಾಶ್, ಗದ್ದಿಗೆ ತಿಪ್ಪೇಸ್ವಾಮಿ, ಶಶಿಧರ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ದಾವಣಗೆರೆ ಮುಖ್ಯ ಬಸ್ ನಿಲ್ದಾಣ ಮತ್ತು ಬೇತೂರು ರಸ್ತೆ ನೂತನ ಬಸ್ ನಿಲ್ದಾಣ ಉದ್ಘಾಟನೆ

» **ದಾವಣಗೆರೆ**

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವತಿಯಿಂದ ದಾವಣಗೆರೆ ಸ್ಮಾರ್ಟ್ ಸಿಟಿ ಯೋಜನೆ ಅಡಿಯಲ್ಲಿ ಪುನರ್ ನಿರ್ಮಾಣಗೊಂಡಿರುವ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ದಾವಣಗೆರೆ ಮುಖ್ಯ ಬಸ್ ನಿಲ್ದಾಣದ ಮತ್ತು ಬೇತೂರು ರಸ್ತೆ ನೂತನ ಬಸ್ ನಿಲ್ದಾಣ ಉದ್ಘಾಟನೆ ಹಾಗೂ ಅಪಘಾತ ರಹಿತ ಚಾಲಕರಿಗೆ ಬೆಳ್ಳಿ ಪದಕ ವಿತರಣೆ ಮತ್ತು ನೂತನ ಬಸ್ ಮಾರ್ಗಗಳ ಉದ್ಘಾಟನಾ ಸಮಾರಂಭವನ್ನು ಮಾರ್ಚ್ 9 ರಂದು ಮಧ್ಯಾಹ್ನ 12 ಗಂಟೆಗೆ ದಾವಣಗೆರೆ ಮುಖ್ಯ ಬಸ್ ನಿಲ್ದಾಣದ ಆವರಣದಲ್ಲಿ ಆಯೋಜಿಸಲಾಗಿದೆ. ದಾವಣಗೆರೆ ಮುಖ್ಯ ಬಸ್ ನಿಲ್ದಾಣವನ್ನು ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್ ಎಸ್ ಮಲ್ಲಿಕಾರ್ಜುನ್ ಉದ್ಘಾಟಿಸುವರು. ಬೇತೂರು ರಸ್ತೆಯ ನೂತನ ಬಸ್ ನಿಲ್ದಾಣವನ್ನು ಸಾರಿಗೆ ಹಾಗೂ ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಉದ್ಘಾಟಿಸುವರು. ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ನಗರಾಭಿವೃದ್ಧಿ ಸಚಿವರಾದ ಬಿ.ಎಸ್ ಸುರೇಶ್(ಭೈರತಿ), ಗುಬ್ಬಿ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ಎಸ್.ಆರ್.ಶ್ರೀನಿವಾಸ, ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮ ನಿಯಮಿತದ ಅಧ್ಯಕ್ಷರಾದ ಎಸ್.ಎನ್.ನಾರಾಯಣಸ್ವಾಮಿ ಉಪಸ್ಥಿತರಿರುವರು. ಮುಖ್ಯ ಅತಿಥಿಗಳಾಗಿ ಸಂಸದ ಡಾ.ಜಿ.ಎಂ.ಸಿದ್ದೇಶ್ವರ, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ಮಹಾನಗರ ಪಾಲಿಕೆ ಮೇಯರ್ ವಿನಾಯಕ ಬಿ.ಹೆಚ್, ವಿಧಾನ ಪರಿಷತ್ ಸದಸ್ಯರಾದ ಕೆ.ಪಿ.ನಂಜುಂಡಿ ವಿಶ್ವಕರ್ಮ, ರವಿಕುಮಾರ್. ಎನ್, ತೇಜಸ್ವಿನಿಗೌಡ, ಎಸ್.ಎಲ್.ಭೋಜೇಗೌಡ, ವೈ.ಎ ನಾರಾಯಣಸ್ವಾಮಿ, ಚಿದಾನಂದ ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್.ನವೀನ್, ಕೆ.ಅಬ್ದುಲ್ ಜಬ್ಬಾರ್, ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಡಾ.ಎನ್.ವಿ.ಪ್ರಸಾದ್, ಕ.ರಾ.ರ.ಸಾ.ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ವಿ.ಅನ್ಬುಕುಮಾರ್, ಕೈಗಾರಿಕಾಭಿವೃದ್ಧಿ ಆಯುಕ್ತರು ಹಾಗೂ ಕೈಗಾರಿಕೆ, ವಾಣಿಜ್ಯ ಇಲಾಖೆಯ ನಿರ್ದೇಶಕರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ, ದಾವಣಗೆರೆ ಸ್ಮಾರ್ಟ್ ಸಿಟಿ ಅಧ್ಯಕ್ಷರಾದ ಗುಂಜನ್ ಕೃಷ್ಣ, ನಗರ ಭೂಸಾರಿಗೆ ನಿರ್ದೇಶನಾಲಯದ ಆಯುಕ್ತರು ನಗರಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ದೀಪಾ ಎಂ, ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರಾದ ಲಕ್ಷ್ಮೀಕಾಂತ್ ರೆಡ್ಡಿ, ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಮತಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್, ಪಾಲಿಕೆ ಆಯುಕ್ತರಾದ ರೇಣುಕಾ, ಸ್ಮಾರ್ಟ್ ಸಿಟಿ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕರಾದ ವೀರೇಶಕುಮಾರ ಉಪಸ್ಥಿತರಿರುವರು.

### ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ನಾಮನಿರ್ದೇಶನಕ್ಕೆ ಆಹ್ವಾನ

» **ದಾವಣಗೆರೆ**

ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗೆ ಸದಸ್ಯರನ್ನಾಗಿ ನಾಮನಿರ್ದೇಶನ ಮಾಡಲು ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ. ಇಬ್ಬರು ಸಮಾಜ ಸೇವಕರು, ತಲಾ ಒಬ್ಬರು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಇಬ್ಬರು ಮಹಿಳಾ ಪ್ರತಿನಿಧಿಗಳು ಒಬ್ಬರು ಅಲ್ಪಸಂಖ್ಯಾತರ ಪ್ರತಿನಿಧಿಗಳನ್ನು ಗುರುತಿಸಿ ನಾಮನಿರ್ದೇಶನ ಮಾಡಲು ಪ್ರಸ್ತಾವನೆಗಳನ್ನು ಆಹ್ವಾನಿಸಲಾಗಿದೆ. ಪ್ರಸ್ತಾವನೆಯನ್ನು ಮಾ. 19 ಕ್ಕೆ ಸಂಜೆ 5.30 ಗಂಟೆಯೊಳಗೆ ಸಹಾಯಕ ಕಾರ್ಮಿಕ ಆಯುಕ್ತರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಬಿಎಸ್‌ಎನ್‌ಎಲ್ ಕಟ್ಟಡ, ದೇವರಾಜ ಅರಸ್ ಬಡಾವಣೆ, ಹರಿಹರ ರಸ್ತೆ, ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕೆಂದು ಸಹಾಯಕ ಕಾರ್ಮಿಕ ಆಯುಕ್ತರಾದ ಇಬ್ರಾಹಿಂ ತಿಳಿಸಿದ್ದಾರೆ.

### ರಾಷ್ಟ್ರೀಯ ಲೋಕ ಅದಾಲತ್ ಮುಂದೂಡಿಕೆ

» **ಚಿಕ್ಕಮಗಳೂರು**

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಮಾರ್ಚ್ 9 ರಂದು ಹಮ್ಮಿಕೊಳ್ಳಲಾಗಿದ್ದ ಲೋಕ ಅದಾಲತ್‌ನ್ನು ಕಾರಣಾಂತರಗಳಿಂದ ಮುಂದೂಡಿ ಮಾರ್ಚ್ 16 ಕ್ಕೆ ನಿಗಧಿಪಡಿಸಲಾಗಿದೆ ಎಂದು ತಿಳಿಸಿದ್ದಾರೆ.

# ಖಾದಿ ವಸ್ತ್ರಕ್ಕೆ ಅಂತರಾಷ್ಟ್ರೀಯ ಮನ್ನಣೆ

## ಜಿಲ್ಲೆಯ 3 ಹಂಜಿ ಘಟಕಗಳು ಶೀಘ್ರ ಆಧುನೀಕರಣ: ಕೇಂದ್ರ ಖಾದಿ ಮತ್ತು ಗ್ರಾಮೋದ್ಯೋಗ ಆಯೋಗದ ಅಧ್ಯಕ್ಷ ಮನೋಜ್ ಕುಮಾರ್

» **ಚಿತ್ರದುರ್ಗ**

ಹತ್ತು ವರ್ಷದ ಮೊದಲು ಖಾದಿ ವಸ್ತ್ರ ವಹಿವಾಟು ಮರಣಾವಸ್ಥೆ ತಲುಪಿತ್ತು. ಕೇವಲ ರಾಜಕಾರಣಿಗಳ ಪೋಷಾಕಾಗಿ ಉಳಿದಿದ್ದ ಖಾದಿ ವಸ್ತ್ರಕ್ಕೆ, ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಅಂತಾರಾಷ್ಟ್ರೀಯ ಮನ್ನಣೆ ದೊರಕಿಸಿ ಕೊಟ್ಟಿದ್ದಾರೆ. ಚಿತ್ರದುರ್ಗ ಜಿಲ್ಲೆಯ ಉಳಿದ ಮೂರು ಹಂಜಿ ಘಟಕಗಳನ್ನು ಶೀಘ್ರವಾಗಿ ಆಧುನೀಕರಣಗೊಳಿಸಲಾಗುವುದು ಎಂದು ಕೇಂದ್ರ ಖಾದಿ ಮತ್ತು ಗ್ರಾಮೋದ್ಯೋಗ ಆಯೋಗದ ಅಧ್ಯಕ್ಷ ಮನೋಜ್ ಕುಮಾರ್ ಹೇಳಿದರು.



ಚಿತ್ರದುರ್ಗ ನಗರದ ಕೈಗಾರಿಕಾ ಪ್ರದೇಶದಲ್ಲಿ ಗುರುವಾರ ಕೇಂದ್ರೀಯ ಹಂಜಿ ಕಾರ್ಯಾಗಾರದ ಆಧುನೀಕರಣಗೊಂಡ ಸೆಂಟ್ರಲ್ ಸ್ಲಿವರ್ ಪ್ಲಾಂಟ್ ಉದ್ಘಾಟಿಸಿ ಅವರು ಮಾತನಾಡಿದರು.

ಸಾಮಾನ್ಯ ಜನರು ಖಾದಿ ಬಳಸಬೇಕು ಎಂಬುದು ಮಹಾತ್ಮಾ ಗಾಂಧೀಜಿಯವರ ಮಹದಾಸೆಯಾಗಿತ್ತು. ಈ ಕನಸನ್ನು ನನಸು ಮಾಡಿದವರು ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು. ಇಂದು ಖಾದಿ ವಿಶ್ವಕ್ಕೆ ಫ್ಯಾಷನ್ ಎನಿಸಿದೆ. ಓಕಲ್ ಫಾರ್ ಲೋಕಲ್ ಧ್ಯೇಯದಿಂದ ಲೋಕಲ್ ಟು ಗ್ಲೋಬಲ್ ಹಂತಕ್ಕೆ ಖಾದಿ ಏರಿದೆ. ಬೆಂಗಳೂರು ಹಾಗೂ ಹುಬ್ಬಳಿ ವಿಭಾಗ ಬಹಳ ಪರಿಶ್ರಮದಿಂದ ಉನ್ನತ ಮಟ್ಟಕ್ಕೆ ಏರಿ ದೇಶಕ್ಕೆ ಮಾದರಿಯಾಗಿವೆ. ಕಳೆದ ಹತ್ತು ವರ್ಷಗಳ ಹಿಂದೆ ಜಾಗತಿಕವಾಗಿ ರೂ.30 ಸಾವಿರ ಕೋಟಿ ಇದ್ದ ಖಾದಿ ವಹಿವಾಟು, ಹತ್ತು ವರ್ಷದಲ್ಲಿ 1 ಲಕ್ಷ ಕೋಟಿ ಅಧಿಕ ವಹಿವಾಟಿಗೆ ಬದಲಾಗಿದೆ. ಕೇಂದ್ರ ಖಾದಿ ಮತ್ತು ಗ್ರಾಮೋದ್ಯೋಗ ಆಯೋಗದ ಅಡಿ 3000 ಖಾದಿ ಸಂಸ್ಥೆಗಳು ಕಾರ್ಯನಿರ್ವಹಿಸುತ್ತವೆ. 5 ಲಕ್ಷ ಜನರು ಕೆಲಸ ಮಾಡುತ್ತಿದ್ದಾರೆ. ಇದರಲ್ಲಿ 4 ಲಕ್ಷ ಮಹಿಳೆಯರೇ ಇರುವುದು ವಿಶೇಷವಾಗಿದೆ. ಸದ್ಯ ನೇಕಾರ ಕೂಲಿಯನ್ನು ಶೇ 7.7 ರಿಂದ ಶೇ.10ಕ್ಕೆ ಏರಿಸಲಾಗಿದೆ. ಬರುವ ಏಪ್ರಿಲ್ ವೇಳೆಗೆ ನೇಕಾರರ ಕೂಲಿಯನ್ನು ಶೇ.33 ರಷ್ಟು ಏರಿಸಲು ಚಿಂತನೆ ನಡೆಸಲಾಗುತ್ತದೆ. ಮುಂದಿನ ವರ್ಷ ಮಹಿಳಾ ಸಿಲಾಯಿ ಸಮೃದ್ಧಿ ಯೋಜನೆ ಜಾರಿ ಮಾಡಲಾಗುವುದು.

ಚಿತ್ರದುರ್ಗ ಜಿಲ್ಲೆಯ ಬಾಕಿ ಇರುವ ಮೂರು ಘಟಕಗಳ ಆಧುನೀಕರಣವನ್ನು ಆದಷ್ಟು ಶೀಘ್ರವಾಗಿ ಕೈಗೊಳ್ಳಲಾಗುವುದು ಎಂದು ಅಧ್ಯಕ್ಷ ಮನೋಜ್ ಕುಮಾರ್ ಭರವಸೆ ನೀಡಿದರು.

ಚಿತ್ರದುರ್ಗದ ಕೆಳಗೋಟೆ ಕೈಗಾರಿಕಾ ಪ್ರದೇಶದಲ್ಲಿ ಸ್ಥಾಪನೆಗೊಂಡಿರುವ ಕೇಂದ್ರೀಯ ಹಂಜಿ ಕಾರ್ಯಾಗಾರ ಘಟಕ 1995–96 ರಲ್ಲಿ ಕಾರ್ಯಾರಂಭ ಮಾಡಿದೆ. ಕರ್ನಾಟಕ ಆಂಧ್ರಪ್ರದೇಶ, ತಮಿಳುನಾಡು, ಕೇರಳ ಮತ್ತು ಮಹಾರಾಷ್ಟ್ರ ರಾಜ್ಯದ ಕೆಲವು ಭಾಗಗಳಲ್ಲಿನ ಸಂಸ್ಥೆಗಳ ಅಗತ್ಯತೆಗಳನ್ನು ಪೂರೈಸುವುದರೊಂದಿಗೆ, 200ಕ್ಕೂ ಹೆಚ್ಚು ಖಾದಿ ಸಂಸ್ಥೆಗಳಿಗೆ ಬೆನ್ನಲುಬಾಗಿದೆ. ಸುಮಾರು 2 ರಿಂದ 3 ಲಕ್ಷ ಖಾದಿ ಕುಶಲಕರ್ಮಿಗಳು, ನೂಲೂ ತೆಗೆಯುವವರು ಹಾಗೂ ನೇಕಾರರಿಗೆ ಪ್ರಯೋಜನವಾಗಿದೆ. ದಕ್ಷಿಣ ಭಾರತದ ಖಾದಿ ಉತ್ಪಾದನಾ ಸಂಸ್ಥೆಗಳಿಗೆ ಬೇಡಿಕೆ ಮತ್ತು ಪೂರೈಕೆಯ ಆಧಾರದ ಮೇಲೆ ಗುಣಮಟ್ಟದ ಪ್ರೈವರ್ ರೋವಿಂಗ್‌ಗಳನ್ನು ಉತ್ಪಾದಿಸಿ ಸರಬರಾಜು ಮಾಡುತ್ತಿದೆ. ಈ ಮೂಲಕ ಗ್ರಾಮೀಣ ಭಾಗದ ನೂಲು ತಯಾರಕರು, ನೇಕಾರರು ಹಾಗೂ ಕುಶಲಕರ್ಮಿಗಳ ಆದಾಯ ಹೆಚ್ಚುವಂತೆ ಮಾಡಿದೆ.

ಕಾರ್ಯಕ್ರಮದಲ್ಲಿ ಮುಂಬಯಿ ಕೇಂದ್ರ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಉಪ ಮುಖ್ಯ ಕಾರ್ಯನಿರ್ವಣಾಧಿಕಾರಿ ಪನ್ನರುತು, ಬೆಂಗಳೂರು ಕೇಂದ್ರ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಮುಖ್ಯ ಕಾರ್ಯನಿರ್ವಣಾಧಿಕಾರಿ ಹೆಚ್.ಆರ್.ರಾಜಪ್ಪ, ಉಪ ಮುಖ್ಯ ಕಾರ್ಯನಿರ್ವಣಾಧಿಕಾರಿ ಎಲ್.ಮದನ್ ಕುಮಾರ್ ರೆಡ್ಡಿ, ತಾಂತ್ರಿಕ ಮೇಲ್ವಿಚಾರಕ ರಮೇಶ್ ಇಟಗಿ, ಚಿತ್ರದುರ್ಗ ವಿಭಾಗದ ಕೇಂದ್ರೀಯ ಹಂಜಿ ಕಾರ್ಯಾಗಾರದ ಯೋಜನಾ ವ್ಯವಸ್ಥಾಪಕ ಸೆಂಥಿಲ್ ಕುಮಾರ್ ರಾಮಸ್ವಾಮಿ ಸೇರಿದಂತೆ ಮತ್ತಿರರು ಉಪಸ್ಥಿತರಿದ್ದರು.

# ಕರ್ನಾಟಕ ರಾಜ್ಯ ಉರ್ದು ಟೀಚರ್ಸ್ ಅಸೋಸಿಯೇಷನ್‌ನಿಂದ ಡಿಡಿಪಿಐಗೆ ಸನ್ಮಾನ



» **ಚಿತ್ರದುರ್ಗ**

ಇದೆ ತಿಂಗಳು ಕರ್ತವ್ಯದಿಂದ ವಯೋ ನಿವೃತ್ತಿಯಾಗಲಿರುವ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್‌ರೆಡ್ಡಿಗೆ ಕರ್ನಾಟಕರಾಜ್ಯಉರ್ದುಟೀಚರ್ಸ್‌ಅಸೋಸಿಯೇಷನ್‌ನಿಂದ ಬಡಾ ಮಕಾನ್‌ನಲ್ಲಿ ಗುರುವಾರ ಹೃದಯಸ್ಪರ್ಶಿಯಾಗಿ ಸನ್ಮಾನಿಸಲಾಯಿತು.

ಮೈಸೂರು ಪೇಟ, ಶಾಲು, ಬೃಹಧಾಕಾರವಾದ ಹೂವಿನ ಹಾರ ಹಾಕಿ ಉರ್ದು ಶಿಕ್ಷಕರುಗಳು ಸನ್ಮಾಸಿ ಗೌರವಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಿ.ಡಿ.ಪಿ.ಐ. ಕೆ.ರವಿಶಂಕರ್‌ರೆಡ್ಡಿ ಯಾವುದೇ ಕೈಗಾರಿಕೆ, ನೀರಾವರಿ ಸೌಲಭ್ಯಗಳಿಲ್ಲದ ಬರದ ನಾಡು ಚಿತ್ರದುರ್ಗ ಜಿಲ್ಲೆ ಅಭಿವೃದ್ದಿಯಾಗಬೇಕಾದರೆ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕೆಂದು ಶಿಕ್ಷಕರುಗಳಿಗೆ ಕರೆ ನೀಡಿದರು.ಶಿಕ್ಷಕರ ಸಂಘದ ಹೋರಾಟಕ್ಕೆ ಅಗಾಧವಾದ ಶಕ್ತಿಯಿದೆ. ನನ್ನ ಹಿಂದೆ ಶಿಕ್ಷಕರ ದೊಡ್ಡ ಪಡೆಯಿದೆ. ನನ್ನ ಕರ್ಮಭೂಮಿ, ಜನ್ಮಭೂಮಿ ಚಿತ್ರದುರ್ಗವನ್ನು ಎಂದಿಗೂ ಮರೆಯುವುದಿಲ್ಲ. ಸರ್ಕಾರಿ ನೌಕರಿ ಎಂದರೆ ನಿವೃತ್ತಿಯಾಗಲೇಬೇಕು. ಹಾಗಂತ ಮನಸ್ಸಿಗೆ ಬೇಸರಪಟ್ಟುಕೊಳ್ಳುವುದು ಸರಿಯಲ್ಲ. ಶಿಕ್ಷಕರುಗಳ ಸಮಸ್ಯೆಗಳಿಗೆ ಸ್ಪಂದಿಸಿ ಸರ್ಕಾರದಿಂದ ಸಿಗಬೇಕಾದ ಸೌಲಭ್ಯಗಳನ್ನು ದೊರಕಿಸುವಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡಿ ಅನುಭವದ ಆಧಾರದ ಮೇಲೆ ಆಡಳಿತ ನಡೆಸಿದ್ದೇನೆ. ದುಃಖ ದುಮ್ಮಾನಗಳನ್ನು ಹೊತ್ತು ಬಂದವರಿಗೆ ಸ್ಪಂದಿಸಿದ್ದೇನೆಂಬ ಆತ್ಮತೃಪ್ತಿಯಿದೆ. ನಿವೃತ್ತಿಯ ನಂತರವೂ ಚಟುವಟಿಕೆಯಿಂದ ಇರುತ್ತೇನೆಂದು ಹೇಳಿದರು.

ಶಿಕ್ಷಣ ಇಲಾಖೆ ದೊಡ್ಡದು. ಜೀವನದಲ್ಲಿ ಪಶ್ಚಾತಾಪ ಪಟ್ಟುಕೊಳ್ಳುವಂತ ಕೆಲಸ ಯಾರು ಮಾಡಬಾರದು. ಸಕಾರಾತ್ಮಕ ಚಿಂತನೆಯಿದ್ದರೆ ಜೀವನದಲ್ಲಿ ಯಶಸ್ಸು ಕಾಣಬಹುದು. ಅಬ್ದುಲ್ ಕಲಾಂರಂತ ವ್ಯಕ್ತಿಗಳನ್ನು ಸೃಷ್ಟಿಸುವ ಹೊಣೆಗಾರಿಕೆ ಶಿಕ್ಷಕರುಗಳ ಮೇಲಿದೆ. ಮಕ್ಕಳಿಗೆ ಪುಸ್ತಕ ಓದುವ ಹವ್ಯಾಸ ರೂಢಿಸಿ ಎಂದು ಕಿವಿಮಾತು ಹೇಳಿದರು.ಸನ್ಮಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಸ್ನೇಹಜೀವಿ, ಸಮಾಜ ಮುಖಿಯಾಗಿ ಕೆಲಸ ಮಾಡುತ್ತಿರುವ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್‌ರೆಡ್ಡಿರವರಲ್ಲಿ ಎಲ್ಲರನ್ನು ಸಮಾನವಾಗಿ ಕಾಣುವ ಗುಣವಿರುವುದರಿಂದ ಎಲ್ಲರ ಮನಸ್ಸು ಮುಟ್ಟಿದ್ದಾರೆ. ಸಾಮಾನ್ಯರಲ್ಲಿ ಸಾಮಾನ್ಯರಾಗಿ ಕೆಲಸ ಮಾಡಿದ್ದಾರೆ. ಮಕ್ಕಳನ್ನು ಉತ್ತಮ ಪ್ರಜೆಗಳನ್ನಾಗಿ ಸಿದ್ದಪಡಿಸುವ ಕೆಲಸ ಶಿಕ್ಷಕರುಗಳಿಂದ ಮಾತ್ರ ಸಾಧ್ಯ ಎಂದರು.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಮಹಂತೇಶ್ ಮಾತನಾಡುತ್ತ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಚಿತ್ರದುರ್ಗ ಜಿಲ್ಲೆಯನ್ನು ಒಂದನೆ ಸ್ಥಾನಕ್ಕೆ ತರುವಲ್ಲಿ ಶ್ರಮಿಸಿ ರಾಜ್ಯದಲ್ಲಿಯೇ ಜಿಲ್ಲೆಯ ಹೆಸರನ್ನು ಮೊಳಗಿಸಿರುವ ಡಿ.ಡಿ.ಪಿ.ಐ. ಕೆ.ರವಿಶಂಕರ್‌ರೆಡ್ಡಿ ಶಿಕ್ಷಕರುಗಳಲ್ಲಿ ಶಿಕ್ಷಕರಾಗಿ ಮಕ್ಕಳಲ್ಲಿ ಮಕ್ಕಳಾಗಿ ಬೆರೆತಿದ್ದಾರೆ.ಶಿಕ್ಷಕರುಗಳ ಸಂಘಟನೆಯಲ್ಲಿ ಸಾಕಷ್ಟು ಸಮಸ್ಯೆಗಳಿವೆ. ಪದವೀಧರ ಶಿಕ್ಷಕರುಗಳಿಗೆ ಬಡ್ತಿ, ಎನ್.ಪಿ.ಎಸ್. ಸಹ ಶಿಕ್ಷಕರುಗಳಿಂದ ಮುಖ್ಯ ಶಿಕ್ಷಕರಿಗೆ ಬಡ್ತಿ, ಏಳನೆ ವೇತನ ಆಯೋಗ, ಉರ್ದು ಶಾಲೆಗಳಲ್ಲಿನ ಸಮಸ್ಯೆ ಇವುಗಳಿಗೆ ಪರಿಹಾರ ಕಂಡುಕೊಳ್ಳಲು ನಮ್ಮ ಹೋರಾಟ ನಿರಂತರವಾಗಿರುತ್ತದೆ. ಮಕ್ಕಳ ಗುಣಾತ್ಮಕ ಶಿಕ್ಷಣಕ್ಕೆ ಶಿಕ್ಷಕರುಗಳು ಒತ್ತು ಕೊಡಬೇಕೆಂದು ತಿಳಿಸಿದರು.

ಕ್ಷೇತ್ರ ಸಮನ್ವಯಾಧಿಕಾರಿ ಸಂಪತ್ ಕುಮಾರ್, ಡಿ.ವೈ.ಪಿ.ಸಿ. ವೆಂಕಟೇಶಪ್ಪ, ಕೆಂಚಪ್ಪ, ಇ.ಸಿ.ಓ. ಸಮೀರ ಇವರುಗಳು ಮಾತನಾಡಿದರು.

ತಾಜಿರ್‌ಭಾಷ,ಪರ್ವಿನ್‌ತಾಜ್,ಎಂ.ಎಸ್.ಲತ, ಉಮರ್‌ಭಾಷ, ಹಾಗೂ ಪದಾಧಿಕಾರಿಗಳು ವೇದಿಕೆಯಲ್ಲಿದ್ದರು.

# ಅಧಿಕಾರಿಗಳ ಬಳಿ ತಪ್ಪು ಕೆಲಸ ಮಾಡಿಸಿಲ್ಲ, ತಾಲ್ಲೂಕಿನ ಅಭಿವೃದ್ಧಿಗೆ ಶ್ರಮಿಸಿದ್ದೇನೆ: ಶಾಸಕ ಗೋವಿಂದಪ್ಪ



» **ಹೊಸದುರ್ಗ**

ಹಣ ಪಡೆದಿರುವ ಬಗ್ಗೆ ಯಾರಾದರೂ ಸಾಬೀತು ಪಡಿಸಿದರೆ ನಾನು ಈಗಲೇ ರಾಜೀನಾಮೆ ನೀಡುವೆ ಅಧಿಕಾರದಲ್ಲಿ ಇರಲಿ, ಇಲ್ಲದಿರಲಿ. ಮರಳು ಹೊಡೆಯಲು ಅವಕಾಶ ಕಲ್ಪಿಸಿ, ಯಾರಿಂದಲಾದರೂ ಹಣ ಪಡೆದಿದ್ದೇನೆ ಎಂದು ಯಾರೊಬ್ಬರು ಹೇಳಿದರೆ ಈ ಕೂಡಲೇ ರಾಜೀನಾಮೆ ನೀಡುತ್ತೇನೆ ಎಂದು ಶಾಸಕ ಬಿ.ಜಿ ಗೋವಿಂದಪ್ಪ ಸವಾಲ್ ಹಾಕಿದ್ದಾರೆ.

ತಾಲ್ಲೂಕು ಆಡಳಿತ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಮತ್ತು ನಿಗಮ ಹಾಗೂ ಪುರಸಭೆ ವತಿಯಿಂದ ಪಟ್ಟಣದ ಅಶೋಕ ರಂಗಮಂದಿರದಲ್ಲಿ ಆಯೋಜಿಸಿದ್ದ 'ವಿವಿಧ ಯೋಜನೆಯಡಿ ಮಂಜೂರಾಗಿರುವ ಅಭಿವೃದ್ಧಿ ಕಾಮಗಾರಿಗಳ ಭೂಮಿ ಪೂಜೆ ಹಾಗೂ ವಿವಿಧ ಯೋಜನೆ ಅನುದಾನದಲ್ಲಿ ಆಯ್ಕೆಯಾಗಿರುವ ಫಲಾನುಭವಿಗಳಿಗೆ ಪ್ರೋತ್ಸಾಹ ಧನ ವಿತರಿಸಿ ಮಾತನಾಡಿದರು.

ಅಧಿಕಾರಿಗಳ ಬಳಿ ತಪ್ಪು ಕೆಲಸ ಮಾಡಿಸಿಲ್ಲ, ತಾಲ್ಲೂಕಿನ ಅಭಿವೃದ್ಧಿಗೆ ಶ್ರಮಿಸಿದ್ದೇನೆ, ಅಧಿಕಾರಿಗಳು ಸಹಕರಿಸಿದ್ದಾರೆ. ಅವರ ಕೆಲಸ ಮಾಡಲು, ಅವರಿಗೆ ಬಿಡಿ. ತಾಲ್ಲೂಕಿನ ಜನತೆ ಶಾಂತಿಯಿಂದ ಇದ್ದಾರೆ. ಅಧಿಕಾರಿಗಳಿಗೆ ತೊಂದರೆ ಕೊಟ್ಟರೇ, ಕಾನೂನು ಚೌಕಟ್ಟಿನಲ್ಲಿ ಹೋರಾಟ ನಡೆಸಲಾಗುವುದು ಎಂದು ಮಾಜಿ ಸಚಿವ ಗೂಳಿಹಟ್ಟಿಶೇಖರ್ ಅವರಿಗೆ ಹಾಲಿ ಶಾಸಕ ಗೋವಿಂದಪ್ಪ ತಿರುಗೇಟು ನೀಡಿದ್ದಾರೆ, ನೀವು ಶಾಸಕರಿದ್ದ ಅವಧಿಯಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಇವಾಗ ಹೋರಾಟ ನಡೆಸುವುದು ವಿಪರ್ಯಾಸ. ವಿನಾಃ ಕಾರಣ ಅಧಿಕಾರಿಗಳಿಗೆ ತೊಂದರೆ ಕೊಟ್ಟರೆ ಸುಮ್ಮನಿರುವುದಿಲ್ಲ, ಅವರ ಕೆಲಸ ಮಾಡಲು, ಮಾನಸಿಕ ನೆಮ್ಮದಿ ನೀಡಿ, ತಪ್ಪಿದ್ದಲ್ಲಿ ಕಾನೂನು ಚೌಕಟ್ಟಿನಲ್ಲಿ ಹೋರಾಟ ನಡೆಸಲಾಗುವುದು ಮಾಜಿ ಸಚಿವ ಗೂಳಿಹಟ್ಟಿ ಡಿ ಶೇಖರ್ ಗೆ ಖಡಕ್ ಸೂಚನೆ ನೀಡಿದರು. ಸರ್ವೆ ನಂ 86 ರ 21 ಎಕರೆ ಭೂಮಿಯನ್ನು ಅರಣ್ಯ ಇಲಾಖೆಯಿಂದ ಕಂದಾಯ ಇಲಾಖೆ ಹಿಂಪಡೆದಿದೆ. ಈ ಪ್ರದೇಶದಲ್ಲಿ ತಾಲ್ಲೂಕಿನ ಬಡ ಜನರಿಗೆ ಮನೆ ನಿರ್ಮಿಸಿಕೊಡಲಾಗುವುದು ಎಂದರು.

## ಪ್ರಮುಖ ಸುದ್ದಿ

### ಭದ್ರಾಮೇಲ್ದಂಡೆ ಕೇಂದ್ರ ಸರ್ಕಾರ ಮಂಜೂರು ಮಾಡಿರುವ 5300 ಕೋಟಿ ರೂಗೆ ನಡೆಸುತ್ತಿದ್ದ ರೈತರ ಧರಣಿ

# 33 ದಿನಗಳಿಂದ ನಡೆಸುತ್ತಿದ್ದ ಧರಣಿ ತಾತ್ಕಾಲಿಕ ಸ್ಥಗಿತ

» **ಚಿತ್ರದುರ್ಗ**

ಭದ್ರಾಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರ ಮಂಜೂರು ಮಾಡಿರುವ ಐದು ಸಾವಿರದ ಮುನ್ನೂರು ಕೋಟಿ ರೂ. ಗಳನ್ನು ಬಿಡುಗಡೆಗೊಳಿಸುವಂತೆ ಕಳೆದ 33 ದಿನಗಳಿಂದ ಜಿಲ್ಲಾ ಪಂಚಾಯಿತಿ ಎದುರು ನಡೆಸುತ್ತಿದ್ದ ಧರಣಿಯನ್ನು ತಾತ್ಕಾಲಿಕವಾಗಿ ಅಂತ್ಯಗೊಳಿಸಲಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ, ಕಾರ್ಯಾಧ್ಯಕ್ಷ ಈಚಘಟ್ಟದ ಸಿದ್ದವೀರಪ್ಪ ತಿಳಿಸಿದರು.



ಧರಣಿ ಸ್ಥಳದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು 1974 ರಲ್ಲಿದ್ದಂತ ಬರಗಾಲ ಈಗ ಮತ್ತೆ ಎದುರಾಗಿದೆ. ಭದ್ರಾಮೇಲ್ದಂಡೆ ವಿಚಾರವಾಗಿ ಸರ್ಕಾರದ ಗಮನ ಸೆಳೆಯುತ್ತಲೆ ಬರುತ್ತಿದ್ದೇವೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜವಾಬ್ದಾರಿಯಿಂದ ನಡೆದುಕೊಂಡಿದ್ದರೆ ಇಷ್ಟೊತ್ತಿಗೆ ಜಿಲ್ಲೆಗೆ ನೀರು ಹರಿಯುತ್ತಿತ್ತು. ಕೆರೆಗಳು ತುಂಬಿರುತ್ತಿದ್ದವು. ನೀರಾವರಿ ಯೋಜನೆಯನ್ನು ಪೂರ್ಣಗೊಳಿಸುವಂತೆ ಕೇಂದ್ರ ಸಚಿವ ಎ.ನಾರಾಯಣಸ್ವಾಮಿಗೆ ಮನವಿ ಕೊಟ್ಟಿದ್ದೇವೆ. ಆಡಳಿತಾತ್ಮಕ ಹಾಗೂ ಕಾನೂನು ಸಮಸ್ಯೆಗಳನ್ನು ಬಗೆಹರಿಸಿ ಮಳೆಗಾಲ ಮುಗಿಯುವುದರೊಳಗೆ ನೀರಾವರಿ ಯೋಜನೆಯನ್ನು ಮುಗಿಸಬೇಕು. ಚುನಾವಣೆ ಘೋಷಣೆಯಾದ ಒಂದು ವಾರದವರೆಗೆ ನೋಡುತ್ತೇವೆ. ನಮ್ಮ ಬೇಡಿಕೆಗಳನ್ನು ಕೇಂದ್ರ ಸರ್ಕಾರ ಈಡೇರಿಸದಿದ್ದರೆ ಈ ಬಾರಿಯ ಪಾರ್ಲಿಮೆಂಟ್ ಚುನಾವಣೆಯಲ್ಲಿ ಬಿಜೆಪಿ. ವಿರುದ್ದ ಮತ ಚಲಾಯಿಸುವಂತೆ ಜಿಲ್ಲೆಯಾದ್ಯಂತ ಸಂಚರಿಸಿ ಜನರಲ್ಲಿ ಜಾಗೃತಿ ಮೂಡಿಸುತ್ತೇವೆಂದು ಹೇಳಿದರು.

ಇಲ್ಲಿಯವರೆಗೂ ನಮ್ಮ ಧರಣಿಗೆ 2 ಲಕ್ಷ ಹದಿನೆಂಟು ಸಾವಿರದ 900 ರೂ.ಗಳು ಬಂದಿದೆ.

ಒಂದು ಲಕ್ಷ 84 ಸಾವಿರದ 547 ರೂ. ಗಳು ಖರ್ಚಾಗಿದೆ. 34 ಸಾವಿರದ 353 ರೂ.ಗಳು ಉಳಿದಿರುವುದನ್ನು ಮುಂದಿನ ಹೋರಾಟಕ್ಕೆ ಬಳಸುತ್ತೇವೆ. ಹದಿನಾಲ್ಕು ಪ್ಯಾಕೆಟ್ ಅಕ್ಕಿ ಕೂಡ ಮಿಕ್ಕಿದೆ. ಕೆಲವರು ಅವಲಕ್ಕಿ, ಎಣ್ಣೆ ಕೊಟ್ಟಿದ್ದಾರೆ. ನಮಗೆ ಬೆಂಬಲಿಸಿದ ಎಲ್ಲರಿಗೂ ಪ್ರಶಂಸನಾ ಪತ್ರಗಳನ್ನು ನೀಡಬೇಕೆಂದಿದ್ದೇವೆಂದರು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ್ ಡಿ.ಎಸ್.ಹಳ್ಳಿ, ರೈತ ಮುಖಂಡರುಗಳಾದ ಆರ್.ಬಿ.ನಿಜಲಿಂಗಪ್ಪ, ಅಪ್ಪರಸನಹಳ್ಳಿ ಬಸವರಾಜಪ್ಪ, ಮಂಜುನಾಥ್, ರಾಜಶೇಖರ್, ಸತೀಶ್, ಮಲ್ಲೇಶಿ, ತಿಪ್ಪೇಸ್ವಾಮಿ, ನಿರಂಜನಮೂರ್ತಿ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T